ವಿಜಯಪುರ | ಸಂಪುಟ 02 | ಸಂಚಿಕೆ 90 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily


ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಭಾನುವಾರ, ಮೇ 26, 2024



“ಈ ನೆಲದ ಕಾನೂನಿನ ಬಗ್ಗೆ ಕಿಂಚಿತ್ತು ಭಯವಿಲ್ಲದ ವಿಧ್ವಂಸಕ ಶಕ್ತಿಗಳು ಪೋಲಿಸ್ ಠಾಣೆಗಳಿಗೇ ದಾಳಿಮಾಡುತ್ತಿವೆ. ಇದಕ್ಕೆಲ್ಲ ರಾಜ್ಯವಾಳುತ್ತಿರುವ ಕಾಂಗ್ರೆಸ್ ಸರ್ಕಾರವೇ ಕಾರಣವಾಗಿದೆ, ಮುಸ್ಲಿಂ ಮತ ಓಲೈಕೆ ಈ ರಾಜ್ಯವನ್ನು ಅರಾಜಕತೆಯತ್ತ ಕೊಂಡೊಯ್ಯುತ್ತಿದೆ.”

– ಬಿ.ವೈ.ವಿಜಯೇಂದ್ರ
ಬಿಜೆಪಿ ರಾಜ್ಯಾಧ್ಯಕ್ಷರು

ರಾಜ್‌ಕೋಟ್‌ನ ಗೇಮ್‌ಝೋನ್‌ನಲ್ಲಿ ನಡೆದ ದುರ್ಘಟನೆ | ಮೃತರ ಕುಟುಂಬಕ್ಕೆ ರೂ.4ಲಕ್ಷ ಪರಿಹಾರ ಘೋಷಣೆ | ಎಸ್‌ಐಟಿ ತನಿಖೆಗೆ ಸಿಎಂ ಆದೇಶ

# ರಾಜ್‌ಕೋಟ್‌ನಲ್ಲಿ ಭಾರಿ ಅಗ್ನಿ ಅವಘಡ: 24ಮಂದಿ ಸಜೀವ ದಹನ!

ರಾಜ್‌ಕೋಟ್: ಗುಜರಾತ್‌ನ ರಾಜ್‌ಕೋಟ್‌ನಲ್ಲಿ ಟಿಆರ್‌ಪಿ ಗೇಮ್ ಝೋನ್‌ನಲ್ಲಿ ಭಾರೀ ಬೆಂಕಿ ಕಾಣಿಸಿಕೊಂಡಿದೆ. ಈ ವೇಳೆ 9 ಮಕ್ಕಳೂ ಸೇರಿದಂತೆ 24 ಮಂದಿ ಸಜೀವ ದಹನಗೊಂಡಿದ್ದು, 45 ಜನ ಗಂಭೀರವಾಗಿ ಗಾಯಗೊಂಡಿದ್ದಾರೆ.

ಬೆಂಕಿ ಅವಘಡದ ನಂತರ ಇಡೀ ಆಟದ ವಲಯ ಸುಟ್ಟು ಬೂದಿಯಾಗಿದೆ. ಘಟನೆ ಕುರಿತು ಮಾಹಿತಿ ಪಡೆದ ಸುಮಾರು 8 ಅಗ್ನಿಶಾಮಕ ದಳದ ವಾಹನಗಳು ಸ್ಥಳಕ್ಕೆ ಆಗಮಿಸಿದ್ದು ರಕ್ಷಣಾ ಕಾರ್ಯಾಚರಣೆಯ ಜೊತೆಗೆ ಬೆಂಕಿಯನ್ನು ನಿಯಂತ್ರಿಸುವ ಹರಸಾಹಸ ನಡೆಯುತ್ತಿದೆ.

ಮಧ್ಯಾಹ್ನ ಟಿಆರ್‌ಪಿ ಗೇಮಿಂಗ್ ವಲಯದಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ರಾಜ್‌ಕೋಟ್ ಪೊಲೀಸ್ ಆಯುಕ್ತ ರಾಜು ಭಾರ್ಗವ ತಿಳಿಸಿದ್ದಾರೆ. ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ. ಬೆಂಕಿಯನ್ನು ಹತೋಟಿಗೆ ತರಲಾಗಿದೆ. ನಾವು ಸಾಧ್ಯವಾದಷ್ಟು ಮೃತ ದೇಹಗಳನ್ನು ಹೊರತೆಗೆಯಲು ಪ್ರಯತ್ನಿಸುತ್ತಿದ್ದೇವೆ. ಇದುವರೆಗೆ ಸುಮಾರು 24 ಮೃತದೇಹಗಳು ಪತ್ತೆಯಾಗಿದ್ದು, ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಗೇಮಿಂಗ್ ವಲಯದ ಮಾಲೀಕರು ಯುವರಾಜ್ ಸಿಂಗ್ ಸೋಲಂಕಿ ವಿರುದ್ಧ ನಿರ್ಲಕ್ಷ್ಯ ಕುರಿತಂತೆ ಪ್ರಕರಣ ದಾಖಲಿಸುತ್ತೇವೆ. ರಕ್ಷಣಾ ಕಾರ್ಯಾಚರಣೆ ಪೂರ್ಣಗೊಂಡ ನಂತರ ಇಲ್ಲಿ ಹೆಚ್ಚಿನ ತನಿಖೆ ನಡೆಯಲಿದೆ.

ಎಎನ್‌ಐ ವರದಿಯ ಪ್ರಕಾರ, ಬೆಂಕಿ ಎಷ್ಟು ತೀವ್ರವಾಗಿತ್ತು ಎಂದರೆ ಅದರ ಹೊಗೆ 3 ಕಿಲೋಮೀಟರ್ ದೂರದಿಂದ ಗೋಚರಿಸುತ್ತದೆ. ಆದ-ರೆ, ಬೆಂಕಿ ಹೊತ್ತಿಕೊಳ್ಳಲು ಕಾರಣ ಏನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಕಟ್ಟಡ ಕುಸಿದಿರುವುದರಿಂದ ಪರಿಹಾರ ಕಾರ್ಯದಲ್ಲಿ ತೊಂದರೆಯಾಗುತ್ತಿದೆ ಎಂದು ಅಗ್ನಿಶಾಮಕ ದಳದ ಅಧಿಕಾರಿ ತಿಳಿಸಿದ್ದಾರೆ. ಆದಷ್ಟು ಬೇಗ ಜನರನ್ನು ರಕ್ಷಿಸಲು ಪ್ರಯತ್ನಿಸುತ್ತಿದ್ದೇವೆ ಎಂದರು.

ಅಗ್ನಿ ದುರಂತದ ಪ್ರಕರಣವನ್ನು ಗುಜರಾತ ಮುಖ್ಯಮಂತ್ರಿಗಳು ಎಸ್‌ಐಟಿ ತನಿಖೆಗೆ ವಹಿಸಿ ಆದೇಶ ನೀಡಿದ್ದಾರೆ.



### ರೂ.4ಲಕ್ಷ ಪರಿಹಾರ ಘೋಷಣೆ

ಅಗ್ನಿ ದುರಂತದಲ್ಲಿ ಮೃತರಾದವರ ಕುಟುಂಬಕ್ಕೆ ರೂ.4ಲಕ್ಷ ಹಾಗೂ ಗಾಯಾಳುಗಳಿಗೆ ರೂ.50ಸಾವಿರ ಪರಿಹಾರ ಧನವನ್ನು ಗುಜರಾತ ಸರ್ಕಾರ ಘೋಷಿಸಿದೆ.



### ಮಾಲೀಕನನ್ನು ವಶಕ್ಕೆ ಪಡೆದ ಪೊಲೀಸರು

ಗೇಮ್ ಝೋನ್ ಮಾಲೀಕ ಯುವರಾಜ್ ಸಿಂಗ್ ಸೋಲಂಕಿ ಅವರನ್ನು ರಾಜ್‌ಕೋಟ್ ಪೊಲೀಸರು ಬಂಧಿಸಿದ್ದಾರೆ. ಗೇಮ್ ಝೋನ್‌ನ ಮ್ಯಾನೇಜರ್‌ಗಾಗಿ ಪೊಲೀಸರು ಹುಡುಕಾಟ ನಡೆಸುತ್ತಿದ್ದಾರೆ.

ಈ ಆಟದ ವಲಯದ ಒಂದು ಭಾಗದಲ್ಲಿ ನವೀಕರಣ ಕಾರ್ಯ ನಡೆಯುತ್ತಿತ್ತು ಎಂದು ತಿಳಿದು ಬಂದಿದೆ. ಈ ವೇಳೆ ಎರಡು ದಿನಗಳ ಹಿಂದೆ ಶಾರ್ಟ್ ಸರ್ಕ್ಯೂಟ್‌ನಿಂದಾಗಿ ಗೇಮ್ ಝೋನ್ ಬಂದ್ ಆಗಿತ್ತು. ಆದಾಗ್ಯೂ, ಒಂದು ದಿನದ ನಂತರ ಆಟದ ವಲಯವನ್ನು ಪುನಃ ತೆರೆಯಲಾಗಿದೆ ಎಂದು ತಿಳಿದುಬಂದಿದೆ.


### ರಕ್ಷಣಾ ಕಾರ್ಯ ಚುರುಕುಗೊಳಿಸಲು ಸಿಎಂ ಸೂಚನೆ

ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರು ದುರಂತದ ಹಿನ್ನೆಲೆಯಲ್ಲಿ ತಕ್ಷಣದ ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಮಹಾನಗರ ಪಾಲಿಕೆ ಮತ್ತು ಆಡಳಿತಕ್ಕೆ ಸೂಚನೆ ನೀಡಿದ್ದಾರೆ. ಭೂಪೇಂದ್ರ ಪಟೇಲ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. 'ರಾಜ್‌ಕೋಟ್‌ನ ಗೇಮ್ ಝೋನ್‌ನಲ್ಲಿ ಬೆಂಕಿಯ ಘಟನೆಯಲ್ಲಿ, ತಕ್ಷಣದ ರಕ್ಷಣಾ ಮತ್ತು ಪರಿಹಾರ ಕಾರ್ಯಕ್ಕಾಗಿ ಮುನ್ಸಿಪಲ್ ಕಾರ್ಪೊರೇಷನ್ ಮತ್ತು ಆಡಳಿತಕ್ಕೆ ಸೂಚನೆಗಳನ್ನು ನೀಡಲಾಗಿದೆ. ಗಾಯಾಳುಗಳಿಗೆ ತಕ್ಷಣ ಚಿಕಿತ್ಸೆ ನೀಡುವ ವ್ಯವಸ್ಥೆಗೂ ಆದ್ಯತೆ ನೀಡುವಂತೆ ಸೂಚನೆ ನೀಡಲಾಗಿದೆ ಎಂದರು.

### ರಾಜ ನುಡಿ

ಮೈಮೇಲೆ ಏನೂ ಇಲ್ದೆ ಬೆತ್ತಲಾಗಿ ನಿನ್ನ ಭೂಮಿಗೆ ಕಳ್ಸಿದ್ರೆ ಎಲ್ಲವೂ ನಾನೇ ಮಾಡಿದ್ದು ಅಂತಿಯಲ್ಲೋ ಅಲ್ಪ. ಅದಕ್ಕಾಗಿಯೇ ನಿನ್ನನ್ನು ಮೈಮೇಲೆ ಏನೂ ಇಲ್ಲೆ ವಾಪಸ್ಸು ಕರೆಸಿಕೊಳ್ತಿನಿ ಶತ ಮೂರ್ಖ ಎಂದು ನಗುತ್ತಾನಂತೆ ಆ ದೇವರು.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 387

ಇಷ್ಟಲಿಂಗ – ಕರಸ್ಥಲದ ಜ್ಯೋತಿ

*ಕಾಯವಿದ್ದು ಕಾಬುದು ವಿಜ್ಞಾನ,*
*ಜೀವವಿದ್ದು ಕಾಬುದು ಸುಜ್ಞಾನ,*
*ಎರಡಳಿದು ತೋರಿಕೆಯಲ್ಲಿ ಕಾಬುದು ಪರಂಜ್ಯೋತಿಜ್ಞಾನ,*
*ಇಂತೀ ಮೂರು ಮುಖವ ಏಕವ ಮಾಡಿ ಬೇರೊಂದು ಕಾಬುದು ಪರಮಪ್ರಕಾಶಜ್ಞಾನ.*
*ಇಂತೀ ಅಂತರ ಪಟಂತರದಲ್ಲಿ ನಿಂದು ನೋಡುವ ಸಂದೇಹವ ಹರಿದ ಸಂದಿನಲ್ಲಿ ಕುಂದದ ಬೆಳಗು ತೋರುತ್ತದೆ,*
*ಸದಾಶಿವಮೂರ್ತಿಲಿಂಗದಲ್ಲಿ.*

ದೇಶಾದ್ಯಂತ ಇಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆಯನ್ನು ಆಚ-ರಿಸಲಾಗುತ್ತಿದೆ, ಸುಮಾರು 900 ವರ್ಷಗಳ ಹಿಂದೆಯೇ ಈ ನಾಡಿನಲ್ಲಿ ಬಸವಾದಿ ಶರಣರು ಅನೇಕ ವೈಜ್ಞಾನಿಕ ವಿಚಾರಧಾರೆಗ ಳನ್ನು ಅರಿತುಕೊಂಡು ಅವುಗಳನ್ನು ತಮ್ಮ ವಚನಗಳಲ್ಲಿ ಅಡಗಿಸಿಟ್ಟಿರುವದನ್ನು ಗುರುತಿಸಲು ಸಕಾಲವಿದು. 18ನೇ ಶತಮಾನದಲ್ಲಿ ವೈಜ್ಞಾನಿಕ ಪ್ರವರ್ಧಮಾನಕ್ಕೆ ಕಾಲಿಟ್ಟ ಕೆಲವು ಯುರೋಪಿನ ದೇಶಗಳ ಸಾಧನೆಯನ್ನೇ ಇಡೀ ಜಗತ್ತು ಕೊಂಡಾಡುವ ಭರದಲ್ಲಿ ಅವರಿಗಿಂತಲೂ 600 ವರ್ಷಗಳ ಮೊದಲೇ ವಿಜ್ಞಾನಕ್ಕೆ ಒಂದು ಸ್ಪಷ್ಟ ವ್ಯಾಖ್ಯಾನ ನೀಡಿರುವುದನ್ನು ಅರಿವಿನ ಮಾರಿತಂದೆಯವರ ಈ ವಚನದಲ್ಲಿ ನಾವು ಕಾಣುತ್ತೇವೆ “ಕಾಯವಿದ್ದು ಕಾಬುದು ವಿಜ್ಞಾನ, ಜೀವವಿದ್ದು ಕಾಬುದು ಸುಜ್ಞಾನ” ಎನ್ನುವಲ್ಲಿ ಕಣ್ಣಿಗೆ ಗೋಚರಿಸುವ ಸತ್ಯವನ್ನು ವಿಜ್ಞಾನವೆಂದು ಅಂದೇ ಅರಿವಿನಮಾರಿ ತಂದೆಯವರು ಕರೆದಿದ್ದಾರೆ. ಜೀವಕ್ಕೆ ಸತ್ಯವೆಂದು ಉಂಟಾಗುವ ಅರಿವನ್ನು ಸುಜ್ಞಾನವೆನ್ನುತ್ತಾರೆ. ಈ ಸುಜ್ಞಾನ ಮತ್ತು ವಿಜ್ಞಾನವನ್ನು ಅಳಿದು ಮೇಲೆ ಉಳಿಯುವ ಆಧ್ಯಾಂತಿಕ ಸತ್ಯವನ್ನೇಪರಂಜ್ಯೋತಿ ಜ್ಞಾನ ಎಂದಿದ್ದಾರೆ.ಅಂಗ ಮತ್ತು ಲಿಂಗ ಭಾವಗಳನ್ನು ಅಳಿಯುವ ಮೂಲಕ ಉಳಿದುಕೊಳ್ಳುವ ಅರಿವನ್ನು ಪರಮ ಪ್ರಕಾಶ ಜ್ಞಾನ ಎನ್ನುತ್ತಾರೆ.ಹೀಗೆ ಜ್ಞಾನದ ವಿವಿಧ ಪ್ರಕಾರಗಳನ್ನು ತಿಳಿಸುತ್ತಾ ವೈಜ್ಞಾನಿಕ ಚಿಂತನೆಗೈದಿರುವುದನ್ನು ಅನೇಕ ಶರಣರ ವಚನಗಳಲ್ಲಿ ನಾವು ಕಾಣುತ್ತೇವೆ. ಚನ್ನಬಸವಣ್ಣ,ಅಲ್ಲಮಪ್ರಭು, ಅಕ್ಕಮಹಾದೇ ವಿ ಯವರವಚನಗಳಲ್ಲೂ ಸೃಷ್ಟಿಯ ಉಗಮದ astronomy ಬಗ್ಗೆ, ಚೆನ್ನಬಸವಣ್ಣನವರ ಕರಣಹಸಿಗೆ ಘಟಚಕ್ರ ಕೃತಿಯಲ್ಲಿ ಮಾನವ ದೇಹ ವಿಜ್ಞಾನದ Human physiology ಅಂಶಗಳನ್ನು ಕಾಣುತ್ತೇವೆ. ಶರಣರ ವೈಜ್ಞಾನಿಕ ಚಿಂತನೆಗೆ ಶರಣು ಎನ್ನೋಣ..

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಹಿರಿಯ ಪತ್ರಕರ್ತ ಆರ್.ಜಯಕುಮಾರ್ ನಿಧನಕ್ಕೆ ಕೆಯುಡಬ್ಲ್ಯೂಜೆ ಸಂತಾಪ

ಉದಯರಶ್ಮಿ ನ್ಯೂಸ್



ಬೆಂಗಳೂರು: ಹಿರಿಯ ಪತ್ರಕರ್ತ ಆರ್.ಜಯಕುಮಾರ್ (64)ಅವರು ಅನಾರೋಗ್ಯದ ಕಾರಣದಿಂದಾಗಿ ಶನಿವಾರ ಮಧ್ಯಾಹ್ನ ಮೃತಪಟ್ಟಿದ್ದಾರೆ.

ಕೊಡಗಿನವರಾದ ಜಯಕುಮಾರ್, ಚಳವಳಿ ಮೂಲಕವೇ ಪತ್ರಕರ್ತರಾಗಿ ರೂಪುಗೊಂಡವರು. ಸಂಯುಕ್ತ ಕರ್ನಾಟಕ, ವಿಜಯ ಕರ್ನಾಟಕ ಪತ್ರಿಕೆ, ಉದಯ ಟಿವಿ ಸೇರಿದಂತೆ ಹಲವಾರು ಪತ್ರಿಕೆಗಳಲ್ಲಿ ರಾಜ್ಯದ ನಾನಾ ಭಾಗದಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ವೃತ್ತಿ ಮಾಡಿದ್ದರು.

ಹಿರಿಯ ಮತ್ತು ಕ್ರಿಯಾಶೀಲ ಪತ್ರಕರ್ತರಾಗಿದ್ದ ಆರ್.ಜಯಕುಮಾರ್ ಅವರ ನಿಧನಕ್ಕೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ ತೀವ್ರ ಸಂತಾಪ ವ್ಯಕ್ತಪಡಿಸಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು (ಕೆಯುಡಬ್ಲ್ಯೂಜೆ) ಎಚ್.ಎಸ್. ದೊರೆಸ್ವಾಮಿ ಅವರ ಹೆಸರಿನಲ್ಲಿ ಕೊಡ ಮಾಡುವ ಪ್ರಶಸ್ತಿಗೆ ಆರ್.ಜಯಕುಮಾರ್ ಭಾಜನರಾಗಿದ್ದರು. ಅನಾರೋಗ್ಯದ ಕಾರಣದಿಂದ ಚಿತ್ರದುರ್ಗದಲ್ಲಿ ನಡೆದ ಪ್ರಶಸ್ತಿ



ಪ್ರದಾನ ಕಾರ್ಯಕ್ರಮಕ್ಕೆ ಬರಲು ಸಾಧ್ಯವಾಗದ ಕಾರಣ, ಮೈಸೂರಿನ ಅವರ ತೋಟದ ಮನೆಗೆ ಹೋಗಿ ಅಲ್ಲಿ ಕೆಯುಡಬ್ಲ್ಯೂಜೆ ಪ್ರಶಸ್ತಿ ಪ್ರದಾನ ಮಾಡಿತ್ತು ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದ್ದಾರೆ.

ಜಯಕುಮಾರ್ ನಿಧನದಿಂದ ಕ್ರೀಯಾಶೀಲ ಪತ್ರಕರ್ತನನ್ನು ಸುದ್ದಿಮನೆ ಕಳೆದುಕೊಂಡಿದೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ. ದುಃಖ ಭರಿಸುವ ಶಕ್ತಿಯನ್ನು ಕುಟುಂಬಕ್ಕೆ ದೇವರು ಕರುಣಿಸಲಿ ಎಂದು ಕಾನಿಪ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಪ್ರಾರ್ಥಿಸಿದ್ದಾರೆ.

ವಿಜಯಪುರದಲ್ಲಿ ಮುಸ್ಲಿಂ ಸಮುದಾಯದ ಮುಖಂಡರಿಂದ ಪತ್ರಿಕಾಗೋಷ್ಠಿ

## ಎಂಎಲ್ಸಿ ಚುನಾವಣೆ: ಮುಸ್ಲಿಂ ವ್ಯಕ್ತಿಯನ್ನು ಆಯ್ಕೆ ಮಾಡಲು ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಜ್ಯದ ಮುಂಬರುವ ದಿನಗಳಲ್ಲಿ ವಿಧಾನ ಪರಿಷತ್‌ನ 11 ಜನ ಸದಸ್ಯರ ಆಯ್ಕೆ ಪ್ರಕ್ರಿಯೆ ನಡೆಯಲಿದ್ದು, ಕಾಂಗ್ರೆಸ್ ಪಕ್ಷದಿಂದ 7 ಜನ ಸದಸ್ಯರನ್ನು ಆಯ್ಕೆ ಮಾಡುವ ಅವಕಾಶವಿದೆ. ಈ ಪೈಕಿ ವಿಜಯಪುರ ಜಿಲ್ಲೆಯಿಂದ ಮುಸ್ಲಿಂ ಸಮುದಾಯದ ಒರ್ವ ವ್ಯಕ್ತಿಯನ್ನು ಆಯ್ಕೆ ಮಾಡಬೇಕು ಎಂದು ಮುಸಿಂ ಸಮಾಜದ ಮುಖಂಡ ಎಂ.ಸಿ. ಮುಲ್ಲಾ ಕಾಂಗ್ರೆಸ್ ಪಕ್ಷದ ಮುಖಂಡರಿಗೆ ಒತ್ತಾಯಿಸಿದ್ದಾರೆ.

ವಿಜಯಪುರ ನಗರದ ಖಾಸಗಿ ಹೋಟೆಲ್‌ನಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ವಿಜಯಪುರ ಜಿಲ್ಲೆಯಲ್ಲಿ ಕಳೆದ ಚುನಾವಣೆಯಲ್ಲಿ ಒಟ್ಟು 8 ವಿಧಾನಸಭಾ ಕ್ಷೇತ್ರಗಳ ಪೈಕಿ 6 ಸ್ಥಾನಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಆಯ್ಕೆಯಾಗಿದ್ದಾರೆ. ಈ 6 ಜನ ಶಾಸಕರ ಆಯ್ಕೆಗೆ ಮುಸ್ಲಿಂ ಸಮುದಾಯದ ಮತಗಳೆ ಕಾರಣ, ಮುಸ್ಲಿಂ ಸಮುದಾಯದ ಬೆಂಬಲದಿಂದಾಗಿ ಕಾಂಗ್ರೆಸ್ ನಾಯಕರು ಗೆಲುವು ಸಾಧಿಸಿದ್ದಾರೆ. ಆದರೆ ಈ 6 ಜನರಲ್ಲಿ ಒರ್ವ ಶಾಸಕನು ಮುಸ್ಲಿಂ ಶಾಸಕ ಇಲ್ಲ ಎಂದರು.

ಈ ಹಿಂದೆ ಜ್ಯಾತ್ಯಾತೀತ ಎನಿಸಿಕೊಂಡ ಜೆಡಿಎಸ್ ಪಕ್ಷಕ್ಕೆ ಮುಸ್ಲಿಂ ಸಮುದಾಯದ ಜನರು ಬೆಂಬಲಿಸಿದ್ದರು. ಆದರೆ ಜೆಡಿಎಸ್ ಪಕ್ಷ ಬಿಜೆಪಿ ಪಕ್ಷದ ಮಿತ್ರ ಪಕ್ಷವಾದ್ದರಿಂದ ಮುಸ್ಲಿಂ ಸಮುದಾಯದ ಜನರು ಸಂಪೂರ್ಣವಾಗಿ ಜ್ಯಾತ್ಯಾತೀತ ಪಕ್ಷ ಎನಿಸಿಕೊಂಡ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿದ್ದಾರೆ. ಜಿಲ್ಲೆಯ ಮುಸ್ಲಿಂ ಸಮುದಾಯದ ಜನರು 100ಕ್ಕೆ 100ರಷ್ಟು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿದ್ದಾರೆ ಎಂದು ತಿಳಿಸಿದರು.

ಆದ್ದರಿಂದ ನಾವು ಕಾಂಗ್ರೆಸ್ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ಕೈಗಾರಿಕಾ ಸಚಿವರಾದ ಎಂ.ಬಿ. ಪಾಟೀಲ್, ಹಾಗೂ ಸಕ್ಕರೆ ಸಚಿವ ಶಿವಾನಂದ ಪಾಟೀಲ್, ಕಾಂಗ್ರೆಸ್ ಪಕ್ಷದ ಎಲ್ಲ ಶಾಸಕರು, ಎಲ್ಲ ನಾಯಕ-ರಿಗೆ ಕೇಳುವುದು ಒಂದೇ. ಈ ಬಾರಿ ವಿಧಾನ ಪರಿಷತ್ ಸ್ಥಾನಕ್ಕೆ 7 ಸ್ಥಾನಗಳಲ್ಲಿ ಮುಸಿಂ ಸಮುದಾಯಕ್ಕೂ ಪ್ರಾತಿನಿಧ್ಯ ನೀಡಬೇಕು. ವಿಶೇಷವಾಗಿ ವಿಜಯಪುರ ಜಿಲ್ಲೆಯಿಂದ ಯಾರಾದರೂ ಒಬ್ಬರನ್ನು ವಿಧಾನ ಪರಿಷತ್ ಸದಸ್ಯರನ್ನಾಗಿ ಆಯ್ಕೆ ಮಾಡಬೇಕು. ಈ ಮೂಲಕ ಮುಸ್ಲಿಂ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಸ್ಲಿಂ ಸಮುದಾಯದ ಮುಖಂಡರಾದ ಅಕ್ರಂ ಮಾಶ್ಯಾಳಕರ್, ಜಮೀರ್‌ಅಹಮದ್ ಭಕ್ಷಿ, ಶಬ್ಬಿರ ಜಾಗಿರದಾರ, ದಸ್ತಗೀರ ಸಾಲೋಟಗಿ ಹಾಗೂ ಫಯಾಜ ಕಲಾದಗಿ ಉಪಸ್ಥಿತರಿದ್ದರು.



ವಿಜಯಪುರದಲ್ಲಿ ನಡೆದ ನಾರದ ಜಯಂತಿ ಕಾರ್ಯಕ್ರಮದಲ್ಲಿ ಕಾನಿಪ ಜಿಲ್ಲಾಧ್ಯಕ್ಷ ಸಂಗಮೇಶ ಚೂರಿ ಅಭಿಮತ

## ತ್ರಿಲೋಕದ ಸುವಾರ್ತೆ ನೀಡುತ್ತಿದ್ದ ನಾರದ ಮುನಿ ಆದ್ಯ ಪರ್ತಕರ್ತರು

ಉದಯರಶ್ಮಿ ನ್ಯೂಸ್

ವಿಜಯಪುರ: ಧೃವ ಒಂದು ತಾರೆಯಾಗಲು, ಪ್ರಹ್ಲಾದ ಭಕ್ತ ಪ್ರಹ್ಲಾದನಾಗಲು ಪ್ರೇರಣೆಯಾಗಿದ್ದೇ ನಾರದ ಮುನಿ, ನಾರದ ಮುನಿಗಳು ಅನೇಕರ ಬದುಕನ್ನೇ ಉದ್ಧಾರಗೊಳಿಸಿದವರು ಎಂದು ಡಾ.ಸಂಜೀವ ಜೋಶಿ ಹೇಳಿದರು.

ಮಂಥನ ವಿಜಯಪುರ ಘಟಕದ ಆಶ್ರಯದಲ್ಲಿ ವಿಜಯಪುರದ ಶುಭಶ್ರೀ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ನಾರದ ಜಯಂತಿ ಪ್ರಯುಕ್ತ ನಡೆದ ಉಪನ್ಯಾಸಗೋಷ್ಠಿಯಲ್ಲಿ ತಮ್ಮ ವಿಚಾರ ಪ್ರತಿಪಾದಿಸಿದ ಅವರು,

ನಾರದ ಮುನಿ ಎಂದರೆ ಈ ವಿಷಯ ಅಲ್ಲಿಗೆ, ಅಲ್ಲಿನ ವಿಷಯ ಇಲ್ಲಿಗೆ ಹೇಳುತ್ತಾರೆ ಎಂಬುದು ಪ್ರಚಲಿತದಲ್ಲಿದೆ. ಆದರೆ ಅವರು ಬುದ್ಧಿವಾದದ ಮೂಲಕ ಲೋಕೋದ್ಧಾರ ಮಾಡಿದ ಶ್ರೇಯಸ್ಸು ನಾರದರಿಗೆ ಸಲ್ಲುತ್ತದೆ, ಧೃವ ಕಾಡಿನಲ್ಲಿ ಅಲೆದಾಡುತ್ತಿರುವಾಗ ಅವನಿಗೆ ಓಂ ನಮೋ ಭಗವತೇ ವಾಸುದೇವಾಯಃ ನಮಃ ಎಂಬ ಕಾರಣ ಆತ ಧೃವತಾರೆಯಾಗಲು ಕಾರಣವಾಯಿತು, ಅದೇ ತೆರನಾಗಿ ಪ್ರಹ್ಲಾದನಲ್ಲಿ ಅದಮ್ಯ ಭಕ್ತಿ ಪ್ರವಹಿಸುವಂತೆ ಮಾಡಿ ಅವನನ್ನು ಭಕ್ತ ಪ್ರಹ್ಲಾದವನ್ನಾಗಿ ಮಾಡಿದ್ದು ಸಹ ನಾರದರೇ ಎಂದರು.

ಧರ್ಮದ ಪರವಾಗಿ ನಾರದರು ಸದಾ ಇದ್ದರು, ನದಿ, ಗಿಡಮರಗಳಂತೆ ನಾರದರು ತಮಗಾಗಿ ಎಂದೂ ಬದುಕಲಿಲ್ಲ. ನಾರದ ಮುನಿಗಳ ಜೀವನ ಅಧ್ಯಯನ ಮಾಡಿ ಅವರ ಶ್ರೇಷ್ಠ ತತ್ವಗಳನ್ನು ಅಳವಡಿಸಿಕೊಂಡು ಮುನ್ನಡೆಯಬೇಕು ಎಂದರು.

ಕಾನಿಪ ಜಿಲ್ಲಾ ಘಟಕದ ಅಧ್ಯಕ್ಷ ಸಂಗಮೇಶ ಚೂರಿ ಮಾತನಾಡಿ, ನಾರದ ಮುನಿಗಳು ಭೂಮಿ, ಪಾತಾಳ, ಸ್ವರ್ಗಲೋಕದ ವರದಿಗಾರರಾಗಿದ್ದರು, ಒಂದು ರೀತಿ ಸರ್ವವ್ಯಾಪಿಯಾಗಿದ್ದರು, ತ್ರಿಲೋಕದ ಸುವಾರ್ತೆ ನೀಡುತ್ತಿದ್ದ ನಾರದ ಮುನಿಗಳು ಒಬ್ಬ ಶ್ರೇಷ್ಠ ಹಾಗೂ ಆದ್ಯ ಪರ್ತಕರ್ತರು.

ನಾರದ ಮುನಿ ಮನುಕುಲಕ್ಕೆ ಜ್ಞಾನ ಕೊಡುವ ಶ್ರೇಷ್ಠ ವ್ಯಕ್ತಿ. ಅವರು 64 ವಿದ್ಯೆಗಳಲ್ಲಿ ಪಾರಂಗತವಾಗಿದ್ದರು ಎಂದರು.

ಇದೇ ಸಂದರ್ಭದಲ್ಲಿ ನಾರದ ಮಹರ್ಷಿಗಳ ಭಾವಚಿತ್ರಕ್ಕೆ ಪುಷ್ಪಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಯುಕ್ತ ಕರ್ನಾಟಕ ಹಿರಿಯ ಪತ್ರಕರ್ತ ವಾಸುದೇವ ಹೇರಕಲ್, ಸಂಕೇತ ಬಗಲಿ, ಸಂಗನಗೌಡ ಪಾಟೀಲ, ರಘುತ್ತಮ ಅರ್ಜುಣಗಿ, ರಂಜೀತ ರಜಪೂತ, ಅಕ್ಷಯ ಪಶ್ಚಾಪೂರ, ಶ್ರೀನಿವಾಸ ಗುಜ್ರಾಲ, ಸಂತೋಷ ಕಳ್ಳಿಗುಡ್ಡ, ವಿನೋದಕುಮಾರ ಮಣೂರ ಹಾಗೂ ಅನೇಕ ಕಾರ್ಯಕರ್ತರು ಉಪಸ್ಥಿತರಿದ್ದರು.



## ಇಗ್ನೊ: ಪದವಿ & ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಪ್ರಾರಂಭ

**ಉದಯರಶ್ಮಿ ನ್ಯೂಸ್**

ವಿಜಯಪುರ: ಇಂದಿರಾ ಗಾಂಧಿ ರಾಷ್ಟ್ರೀಯ ಮುಕ್ತ ವಿಶ್ವವಿದ್ಯಾಲಯವು(ಇಗ್ನೊ) 2024 ಜೂನ್ ವರ್ಷದ ಪದವಿ ಮತ್ತು ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಪ್ರಾರಂಭವಾಗಿದ್ದು, ಜೂನ್ 30, 2024 ಕೊನೆಯ ದಿನವಾಗಿದೆ.

ಕೋರ್ಸುಗಳ ಪ್ರವೇಶ ಮತ್ತೀತರ ಮಾಹಿತಿಗಾಗಿ ಇಗ್ನೋ ಅಧ್ಯಯನ ಕೇಂದ್ರ- 1307 ಬಿ. ಎಲ್. ಡಿ. ಈ ಸಂಸ್ಥೆಯ ಜೆ. ಎಸ್. ಎಸ್ ಶಿಕ್ಷಣ ಮಹಾವಿದ್ಯಾಲಯ, ರಾಮ ಮಂದಿರ ರಸ್ತೆ, ಎಸ್. ಎಸ್. ಕ್ಯಾಂಪಸ್, ವಿಜಯಪುರ ಸಂಪರ್ಕಿಸಬಹುದಾಗಿದೆ. ಅಲ್ಲದೇ, ಪ್ರವೇಶ ಪಡೆಯಲು ಬಯಸುವವರು ತಿತಿತಿ.ಎಂಟಿಂಣ.ಚಿಛಿ.ಎಟ ನಲ್ಲಿ ಲಾಗಿನ್ ಆಗಿ ಆನಲೈನ್ ಮೂಲಕ ನೋಂದಣಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9980691291 ದೂರವಾಣಿಯ ಮೂಲಕವೂ ಸಂಪರ್ಕಿಸಬಹುದು ಎಂದು ಇಗ್ನೋ ಕೇಂದ್ರದ ಸಂಯೋಜಕ ಡಾ. ಮಂಜುನಾಥ ಬಿ. ಕೋರಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ನೆಪವಿಟ್ಟುಕೊಂಡು ರಾಜಕಾರಣ :ಪುರಸಭೆ ಸದಸ್ಯೆ ಆರೋಪ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಕಳೆದ ಕೆಲವು ದಿನಗಳ ಹಿಂದೆ ಇಲ್ಲಿನ ವಾರ್ಡ ನಂ 15 ರ ಕೆಲ ನಿವಾಸಿಗಳು ಸರಿಯಾಗಿ ನೀರು ಬರುತ್ತಿಲ್ಲ ಎಂದು ಆರೋಪಿಸಿ ಖಾಲಿ ಕೊಡಗಳನ್ನು ಪುರಸಭೆಗೆ ತಂದು ದಿಢೀರ ಪ್ರತಿಭಟನೆ ನಡೆಸಿದ ಹಿನ್ನೆಲೆ ಇದೇ ವಾರ್ಡನ ಕೆಲ ನಿವಾಸಿಗಳು ಮತ್ತು ವಾರ್ಡ ನ ಪುರಸಭೆ ಸದಸ್ಯೆ ಶನಿವಾರ ಪತ್ರಿಕಾಗೋಷ್ಠಿ ನಡೆಸಿದರು.

ಈ ವೇಳೆ ಇಲ್ಲಿನ ನಿವಾಸಿ ಎಚ್.ಆರ್.ಬಾಗವಾನ ಮಾತನಾಡಿ, ನಮ್ಮಲ್ಲಿ ಸಾಕಷ್ಟು ಅಭಿವೃದ್ಧಿಯ ಕಾಮಗಾರಿಗಳನ್ನು



ನಮ್ಮ ಸದಸ್ಯರು ಮಾಡಿದ್ದಾರೆ. ನಿವಾಸಿಗಳ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸುತ್ತಾರೆ. ಶೌಚಾಲಯ ಸಮಸ್ಯೆ ಬಗ್ಗೆ ಹೇಳುವದಾದರೆ ಪ್ರತ್ಯೇಕ ಶೌಚಾಲಯಗಳ ವ್ಯವಸ್ಥೆ ಕಲ್ಪಿಸಿದ್ದಾರೆ. ಅವುಗಳ ಬಳಕೆಯನ್ನು ಸರಿಯಾಗಿ ಮಾಡುವಲ್ಲಿ ನಮ್ಮ ಜವಾಬ್ದಾರಿಯೂ ಹೆಚ್ಚಿದೆ. ಇನ್ನು ಕುಡಿಯುವ ನೀರಿನ ಸಮಸ್ಯೆ ನಮ್ಮಲ್ಲಿ ಮಾತ್ರವಲ್ಲ ಇಡೀ ಪಟ್ಟಣದಲ್ಲಿಯೇ ಇದೆ. ಮಳೆ, ಗಾಳಿ ಇರೋದರಿಂದ ವಿದ್ಯುತ್ ಸರಿಯಾಗಿ ಇರದ ಕಾರಣ ಈ ಸಮಸ್ಯೆ ಉದ್ಭವಿಸಿದೆ. ನೀರು ಸರಿಯಾಗಿ ಬಂದಿಲ್ಲ ಅನ್ನೋದನ್ನೇ ನೆಪವಾಗಿಟ್ಟುಕೊಂಡು ರಾಜಕಾರಣ ಮಾಡಬಾರದು ಎಂದರು.

ಮತ್ತೀತರ ನಿವಾಸಿಗಳಾದ ಚೇತನ ಮೋಟಗಿ, ಅಯೂಬ ಬಾಗವಾನ, ಇಸ್ರಾಯಿಲ್ ಇಂಡಿಕಾರ, ಅಬ್ದುಲ್‌ಅಜೀಜ ಬಾಗವಾನ ನೂರಜಾನ ಬಾಗವಾನ, ಲಕ್ಷ್ಮೀ ಶಿವಯೋಗಿಮಠ ಮತ್ತೀತರರು ಮಾತನಾಡಿ, ನಿವಾಸಿಗಳ ಏನೇ ಸಮಸ್ಯೆ ಇದ್ದರೂ ಇಲ್ಲಿನ ಸದಸ್ಯರಿಗೆ ತಿಳಿಸಿದಾಗ ಕೂಡಲೇ ಸ್ಪಂದಿಸುತ್ತಾರೆ. ಕೆಲ ಸಮಸ್ಯೆಯಲ್ಲಿ ಸದಸ್ಯರ ಪತಿ ಸ್ವತಃ ತಾವೇ ಕೈಜೋಡಿಸಿ ರಿಪೇರಿ ಮಾಡಿಸಿದ ಉದಾಹರಣೆಗಳಿವೆ. ಬಳಕೆಯ ನೀರಿಗಾಗಿ ಅಲ್ಲಲ್ಲಿ ಟ್ಯಾಂಕರ್‌ಗಳನ್ನು ಜೋಡಿಸಲಾಗಿದೆ. ಬಟನ್ ಹೊಡೆದರೆ ನೀರು ಬರುತ್ತೆ. ಅಲ್ಲದೇ ಬೀದಿ ದೀಪಗಳದ್ದೂ ಯಾವುದೇ ಸಮಸ್ಯೆ ನಮ್ಮಲ್ಲಿ ಇಲ್ಲ. ಸ್ವಾರ್ಥಿಯೊಬ್ಬ ಪುರಸಭೆ ಅಧ್ಯಕ್ಷರ ಹೆಸರು ಕೆಡಿಸಲು ಈ ರೀತಿ ಮಾಡಿದ್ದಾರೆ ಎಂದರು.

ವಾರ್ಡ ನ ಸದಸ್ಯೆ ಮತ್ತು ಮಾಜಿ ಪುರಸಭೆ ಅಧ್ಯಕ್ಷೆ ಪ್ರತಿಭಾ ಅಂಗಡಗೇರಿ ಮಾತನಾಡಿ, ನಮ್ಮ ವಾರ್ಡ ನಲ್ಲಿ ನಾನು ಎಲ್ಲ ಅಭಿವೃದ್ಧಿಯ ಕಾರ್ಯಗಳನ್ನು ಮಾಡಿದ್ದೇನೆ. ನಾನು ಸದಸ್ಯಳಾಗುವ ಮೊದಲು ಈ ವಾರ್ಡ ಹೇಗಿತ್ತು ಸದ್ಯ ಹೇಗಿದೆ ಎಂದು ಸ್ವಲ್ಪ ನೆನಪಿಸಿಕೊಳ್ಳಬೇಕು. ನೀರಿನ ಸಮಸ್ಯೆ ಎದುರಿಸುತ್ತಿರುವಾಗ ನಮ್ಮ ಗಮನಕ್ಕೆ ತಂದಿದ್ದರೆ ಕೂಡಲೇ ಸರಿಪಡಿಸುತ್ತಿದ್ದೆವು. ಕೆಲವರು ಏಕಾಏಕಿ ಪುರಸಭೆಗೆ ತೆರಳಿ ಹೋರಾಟ ನಡೆಸಿದ್ದರ ಹಿಂದೆ ಏನಿದೆ ಎಂದು ತಿಳಿದಿಲ್ಲ ಎಂದರು.

ಈ ವೇಳೆ ಕಮರುನ್ ಮೋಮಿನ, ವಿಜಯ ಬೈಲಾದ, ಮಹಮ್ಮದಹುಸೇನ ಬಾಗವಾನ, ಮುನಾಪ ಮುರಾಳ, ಲತೀಫ್ ನಾಲಬಂದ, ಮಲ್ಲಣ್ಣ ಕುಂಬಾರ, ದ್ಯಾಮಣ್ಣ ಕುಂಬಾರ, ಶಂಕ್ರಮ್ಮ ಕುಂಬಾರ, ಶಿವಗಂಗವ್ವ ಕುಂಬಾರ, ಶೋಭಾ ಕುಂಬಾರ, ಅಮರಮ್ಮ ಮಡಿವಾಳರ, ಕಾಶಿಬಾಯಿ ನಾಡಗೌಡ, ಸುವರ್ಣ ಅಮರಣ್ಣವರ ಸೇರಿದಂತೆ ಮತ್ತೀತರರು ಇದ್ದರು.

## ಚುಟುಕು ದಾಸೋಹಿ ಪ್ರಶಸ್ತಿಗೆ ಪ್ರಭಾಕರ ಭಾಜನ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಮೂಲತಃ ತಾಲೂಕಿನ ನಾಗೋಡ ಗ್ರಾಮದವರಾದ ಸ್ಥಳೀಯ ಸಾಹಿತಿ, ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಭಾಕರ ಖೇಡದ ಅವರು ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ನೀಡುವ ಚುಟುಕು ದಾಸೋಹಿ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಇವರು ತಾಲೂಕು ಚುಟುಕು ಸಾಹಿತ್ಯ ಪರಿಷತ್ತಿನಿಂದ ವಿವಿಧ ಸಾಹಿತ್ಯ ಅಭಿಯಾನಗಳ ಕೈಗೊಳ್ಳುವ ಮೂಲಕ ಸಾಹಿತ್ಯ ಸೇವೆ, ಸುದ್ದಿ ಸೇವೆಯ ನಿರಂತರ ಅಭಿಯಾನಗಳನ್ನು ಮಾಡಿರುವುದು, ಚುಟುಕು ಸಾಹಿತ್ಯ ಸೇರಿದಂತೆ ವಿವಿಧ ಸಾಹಿತ್ಯ ಪ್ರಕಾರಗಳಲ್ಲಿ ಸಾಹಿತ್ಯಕ್ಕೆ ಕೊಡುಗೆ ನೀಡಿರುವುದನ್ನು ಪರಿಗಣಿಸಿ ಈ ಪ್ರಶಸ್ತಿ ನೀಡಲಾಗುತ್ತಿದೆ. ಈ ಪ್ರಶಸ್ತಿಯನ್ನು ಮೇ. 26 ರಂದು ಬೆಳಗ್ಗೆ 10 ಗಂಟೆಗೆ ಶಿರಸಿಯ ನೆಮ್ಮದಿ ಆವರಣದ ರಂಗಧಾಮ ಸಭಾಂಗಣದಲ್ಲಿ ಹಮ್ಮಿಕೊಂಡಿರುವ 12 ನೇ ಚುಟುಕು ಸಾಹಿತ್ಯ ಸಮ್ಮೇಳನದಲ್ಲಿ ಪ್ರದಾನ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಇಂದು ಹೇಮರಡ್ಡಿ ಮಲ್ಲಮ್ಮ ಜಯಂತಿ: ಪ್ರತಿಭಾ ಪುರಸ್ಕಾರ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ವಿರಕ್ತಮಠದ ಶಿವಾನುಭವ ಮಂಟಪದಲ್ಲಿ ಹಂಗರಗಿಯ ಚನ್ನಬಸವೇಶ್ವರ ಪ್ರತಿಷ್ಠಾನವು ಮೇ. 26 ರಂದು ಬೆಳಗ್ಗೆ 10 ಗಂಟೆಗೆ ಪ್ರತಿಭಾ ಪುರಸ್ಕಾರ ಹಾಗೂ ಸಾಧ್ವಿ ಶಿರೋಮಣಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತೋತ್ಸವ ಹಮ್ಮಿಕೊಂಡಿದೆ. ಕಾರ್ಯಕ್ರಮದ ಸಾನಿಧ್ಯವನ್ನು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ವಹಿಸುವರು. ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿ ಉದ್ಘಾಟಿಸುವರು. ಅಧ್ಯಕ್ಷತೆಯನ್ನು ಚನ್ನಬಸವೇಶ್ವರ ಪ್ರತಿಷ್ಠಾನದ ಅಧ್ಯಕ್ಷ ವಿವೇಕಾನಂದ ಕಲ್ಯಾಣಶೆಟ್ಟಿ ವಹಿಸುವರು. ಶಿಕ್ಷಕ ಸಾಹಿತಿ ಅಶೋಕ ಹಂಚಲಿ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ದೇವರಹಿಪ್ಪರಗಿ ಶಾಸಕ ಭೀಮನಗೌಡ(ರಾಜುಗೌಡ) ಪಾಟೀಲ, ತಾಪಂ ಮಾಜಿ ಅಧ್ಯಕ್ಷ ಶ್ರೀಶೈಲಗೌಡ ಹೊಸಳ್ಳಿ, ನೇತಾಜಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರಾಜಶೇಖರ ಪಾಟೀಲ, ತಾಲೂಕು ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೀರಣ್ಣ ಮರ್ತುರ, ಕರವೇ ರಾಜ್ಯ ಸಂಘಟನಾ ಕಾರ್ಯದರ್ಶಿ ಅಶೋಕ ಹಾರಿವಾಳ ಆಗಮಿಸುವರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಕನ್ನಡ ಮಾಧ್ಯಮ, ಆಂಗ್ಲ ಮಾಧ್ಯಮ, ಉರ್ದು ಮಾಧ್ಯಮಗಳಲ್ಲಿ ಅಖಂಡ ತಾಲೂಕಿಗೆ ಪ್ರಥಮ,ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು, ದ್ವಿತೀಯ ಪಿಯುಸಿಯ ಕಲಾ ವಿಭಾಗ, ವಿಜ್ಞಾನ ವಿಭಾಗ, ವಾಣಿಜ್ಯ ವಿಭಾಗದಲ್ಲಿ ಅಖಂಡ ತಾಲೂಕಿಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಹಾಗೂ ರಾಜ್ಯದಲ್ಲಿ ಉತ್ತಮ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವುದು ಎಂದು ಚನ್ನಬಸವೇಶ್ವರ ಪ್ರತಿಷ್ಠಾನದ ಸಂಚಾಲಕಿ ಸಾವಿತ್ರಿ ಕಲ್ಯಾಣಶೆಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಚಡಚಣ ತಾಲೂಕಿನ ರೇವತಗಾಂವದ ಶ್ರೀ ರೇವಣಸಿದ್ದೇಶ್ವರ ಜಾತ್ರೆ ಸಂಪನ್ನ

## ಮೈನವಿರೇಳಿಸಿದ ಜಂಗೀ ನಿಕಾಲಿ ಕುಸ್ತಿ ಪಂದ್ಯಾವಳಿ

**ಉದಯರಶ್ಮಿ ನ್ಯೂಸ್**

ಚಡಚಣ: ಗ್ರಾಮೀಣ ಸೊಗಡನ್ನು ಉಳಿಸುವ ನಿಟ್ಟಿನಲ್ಲಿ ಕುಸ್ತಿ ಪಂದ್ಯಾವಳಿ ಉತ್ತಮ ಪ್ರಯೋಗವಾಗಿದ್ದು, ಗ್ರಾಮೀಣ ಭಾಗದಲ್ಲಿ ಹೆಚ್ಚು ಜನಪ್ರಿಯವಾಗಿರುವ ಕುಸ್ತಿ ಕ್ರೀಡೆ ಇತ್ತೀಚಿನ ದಿನಗಳಲ್ಲಿ ಅವನತಿ ಅಂಚಿನಲ್ಲಿ ಸಾಗುತ್ತಿದೆ. ಅದನ್ನು ಉಳಿಸಿ ಬೆಳೆಸುವ ಅಗತ್ಯವಿದೆ ಎಂದು ಮಾಜಿ ಕುಸ್ತಿ ಪೈಲ್ವಾನರು ಚನ್ನಪ್ಪ ಹತ್ತಳ್ಳಿಯವರು ಹೇಳಿದರು.

ಶುಕ್ರವಾರದಂದು ಗ್ರಾಮದ ಶ್ರೀ ರೇವಣಸಿದ್ದೇಶ್ವರ ಜಾತ್ರೆಯ ಅಂಗವಾಗಿ ಹಮ್ಮಿಕೊಂಡಿದ್ದ ಜಂಗೀ ನಿಕಾಲಿ ಕುಸ್ತಿ ಪಂದ್ಯಾವಳಿಯ ವೇಳೆಯ ನಿರ್ಣಾಯಕರಾಗಿ ಮಾತನಾಡಿದ ಅವರು, ಇಂದಿನ ಮಕ್ಕಳು ಮೊಬೈಲ್‌ಗೆ ದಾಸರಾಗುತ್ತಿದ್ದು, ಸಣ್ಣ ವಯಸ್ಸಿನಲ್ಲೇ ದುಷ್ಚಟಕ್ಕೆ ಒಳಗಾಗುತ್ತಿದ್ದಾರೆ. ಹೀಗಾಗಿ ತಂದೆ-ತಾಯಿ ಎಚ್ಚೆತ್ತುಕೊಂಡು ಮಕ್ಕಳನ್ನು ಪೈಲ್ವಾನರಾಗಲು ಹುರಿದುಂಬಿಸಬೇಕು. ದೇಹ ದಂಡಿಸಿ ಗಟ್ಟಿಮುಟ್ಟಾಗಿ ಕುಸ್ತಿ ಪಟುವಾಗಲು ಮುಂದಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ರೇವಣಸಿದ್ದೇಶ್ವರ ದೇವಾಸ್ಥಾನ ಕಮೀಟಿ ಅಧ್ಯಕ್ಷರಾದ ಪ್ರಕಾಶ ಜೀಗಜೀವಣಿಯವರು ಮಾತನಾಡುತ್ತ, ದೈಹಿಕ ಕಸರತ್ತು ತಾಕತ್ತು ತೋರಿಸುವ ರೈತರ ಹಾಗೂ ಯುವಕರ ಕ್ರೀಡೆಗಳಲ್ಲೊಂದಾದ ಕುಸ್ತಿ ಕರಡಿ ಮನೆಗಳು ಅಳಿವಿನಂಚಿನಲ್ಲಿವೆ. ಇದು ಗ್ರಾಮೀಣ ಕ್ರೀಡೆ ನಾವೆಲ್ಲರೂ ಸೇರಿ ಕಾಪಾಡಿ, ಉಳಿಸಿ ಬೆಳಸಬೇಕು ಮತ್ತು ನಶಿಸಿ ಹೋಗುತ್ತಿರುವ ಗರಡಿ ಮನೆಗಳ ಅಭಿವೃದ್ಧಿಗಾಗಿ ಸರ್ಕಾರ ಮುಂದಾಗಬೇಕು. ಗರಡಿ ಮನೆಗಳು ಹೆಚ್ಚಾಗಬೇಕು ಎಂದು ಹೇಳಿದರು.



ಕುಸ್ತಿ ಅಖಾಡದಲ್ಲಿ ಪೈಲ್ವಾನರು ಎದುರಾಳಿ ಮಣಿಸಲು ಪಟ್ಟು ಹಾಕುತ್ತಿದ್ದರೆ, ಸುತ್ತಲೂ ನೆರೆದಿದ್ದ ಪ್ರೇಕ್ಷಕರು ಕೇಕೆ ಹಾಕಿ ಚಪ್ಪಾಳೆ ತಟ್ಟುತ್ತಾ ಪೈಲ್ವಾನರನ್ನು ಹುರಿದುಂಬಿಸುತ್ತಿದ್ದರು. ನೆಚ್ಚಿನ ಪೈಲ್ವಾನರು ನೆಲಕ್ಕುರುಳಿದಾಗ ಓಹೋ.. ಎಂದು ಉದ್ಗಾರ ತೆಗೆಯುತ್ತಿದ್ದರು. ಮೈನವಿರೇಳಿಸುವಂತಿದ್ದ ಪೈಲ್ವಾನರ ಸೆಣಸಾಟಕ್ಕೆ ಸಾಕ್ಷಿಯಾಗಿದ್ದು ರೇವತಗಾಂವದ ಶ್ರೀ ರೇವಣಸಿದ್ದೇಶ್ವರ



ದೇವಾಸ್ಥಾನ ಆವರಣ. ನೆರೆಯ ಮಹಾರಾಷ್ಟ್ರ ಹಾಗೂ ರಾಜ್ಯದ ವಿವಿಧ ಭಾಗದ ಕುಸ್ತಿಪಟುಗಳು ಸೆಣಸಾಡಿದರು.

ಶುಕ್ರವಾರದಂದು ನಸುಕಿನ ಜಾವ 05 ಗಂಟೆಗೆ ಶ್ರೀ ರೇವಣಸಿದ್ದೇಶ್ವರರಿಗೆ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ ಜರುಗಿತು. ಬೆಳಗ್ಗೆ 6 ಗಂಟೆಗೆ ಭಕ್ತರಿಂದ ಸಕ್ಕರೆ-ಬೆಲ್ಲ ಹಂಚುವ ಕಾರ್ಯಕ್ರಮ ನೆರವೇರಿತು.

07 ಗಂಟೆಗೆ ವಿವಿಧ ವಾದ್ಯವೈಭವಗಳೊಂದಿಗೆ ಶ್ರೀ ರೇವಣಸಿದ್ದೇಶ್ವರರ ಪಲ್ಲಕ್ಕಿ ಸಬೀನ ತಿರುಗುವ ಕಾರ್ಯಕ್ರಮ ನಡೆಯಿತು. ರಾತ್ರಿ 10 ಗಂಟೆಗೆ ಶ್ರೀ ಬಸವೇಶ್ವರ ನಾಟ್ಯ ಸಂಘ ರೆಬಿನಾಳದ ಶ್ರೀಶೈಲ ಅಂಗಡಿಯವರ ನಿರ್ದೇಶನದಲ್ಲಿ 'ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮ' ಎಂಬ ಭಕ್ತಿಮಯ ಸುಂದರ ನಾಟಕ ಜರುಗಿತು.

## ದಿ.ಗುರುಶಾಂತಯ್ಯ ಕುಟುಂಬಕ್ಕೆ ಶಾಸಕ ಮನಗೂಳಿ ಸಾಂತ್ವನ

**ಉದಯರಶ್ಮಿ ನ್ಯೂಸ್**

ಸಿಂದಗಿ: ನಿಮ್ಮೊಂದಿಗೆ ನಾನಿದ್ದೇನೆ. ನಮ್ಮ ಸರ್ಕಾರವಿದೆ ನೀವು ಯಾವುದೇ ರೀತಿಯ ಭಯಪಡುವ ಅವಶ್ಯಕತೆ ಇಲ್ಲ. ಧೈರ್ಯವಾಗಿರಿ ಎಂದು ಶಾಸಕ ಅಶೋಕ್ ಮನಗೂಳಿ ಸಾಂತ್ವನ ಹೇಳಿದರು.

ಇತ್ತೀಚಿಗೆ ಸಿಂದಗಿ ಮತಕ್ಷೇತ್ರದ ಕಕ್ಕಳಮೇಲಿ ಗ್ರಾಮದಲ್ಲಿ ಸಾಲಬಾಧೆ ತಾಳಲಾರದೆ ಆತ್ಮಹತ್ಯೆ ಮಾಡಿಕೊಂಡ ಗುರುಶಾಂತಯ್ಯ ಸಿದ್ದಯ್ಯ



ನಾಗನಮಠ ಅವರ ಮನೆಗೆ ಭೇಟಿ ಮನಗೂಳಿ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು.

ಇದೇ ಸಂದರ್ಭದಲ್ಲಿ ಪ್ರಭುಗೌಡ ಬಿರಾದಾರ, ಶಂಕರ ಮಾವುರ, ಶಫಿಕ ಮುಜಾವರ, ಯಲ್ಲಾಲಿಂಗ ಅಗಸರ, ಶಂಕರಲಿಂಗ ಪತ್ತಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗಣಿಹಾರ ಅವರಿಗೆ ವಿಧಾನ ಪರಿಷತ್ ಗೆ ಅವಕಾಶ ಕಲ್ಪಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**

ಸಿಂದಗಿ: ಜಿಲ್ಲೆಯಲ್ಲಿ ಅಹಿಂದ ಚಳುವಳಿಯನ್ನು ಜೀವಂತವಾಗಿಟ್ಟು ಕಾಂಗ್ರೆಸ್ ಪಕ್ಷಕ್ಕಾಗಿ ನಿಷ್ಠೆಯಿಂದ, ಪ್ರಾಮಾಣಿಕವಾಗಿ ಜಿಲ್ಲೆಯಾದ್ಯಂತ ಅಹಿಂದ ವರ್ಗಗಳ ಧ್ವನಿಯಾಗಿ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳ ಗೆಲುವಿಗಾಗಿ ಪ್ರಾಮಾಣಿಕ ಸೇವೆ ಸಲ್ಲಿಸಿದ ಹಿರಿಯ ಹೋರಾಟಗಾರರು ಕೆಪಿಸಿಸಿ ವಕ್ತಾರ ಎಸ್.ಎಂ.ಪಾಟೀಲ ಗಣಿಹಾರ ಅವರಿಗೆ ವಿಧಾನ ಪರಿಷತ್ ಪ್ರವೇಶಿಸಲು ಅವಕಾಶ ಕಲ್ಪಿಸಬೇಕೆಂದು ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ಜಿಲ್ಲಾ ಯುವ ಘಟಕದ ಅಧ್ಯಕ್ಷ ಮೋದಿನ್ ಶಾಬಾದಿ ಒತ್ತಾಯಿಸಿದ್ದಾರೆ.

ಜಿಲ್ಲೆಯಲ್ಲಿ ಅಹಿಂದ ಸಮುದಾಯ ರಾಜಕೀಯದಿಂದ ವಂಚಿತವಾಗಿದ್ದು, ಅಹಿಂದರ ಶಕ್ತಿಯನ್ನು ದುರ್ಬಲಗೊಳಿಸಲು ಹಲವಾರು ಕುತಂತ್ರಗಳು ನಡೆಯುತ್ತಿವೆ. ಕಾರಣ ಅಹಿಂದ ಸಮುದಾಯಗಳಿಗೆ ನ್ಯಾಯ ಒದಗಿಸಿದಂತಾಗುತ್ತದೆ. ಅಹಿಂದ ಮತಗಳಿಂದ ಅಧಿಕಾರಕ್ಕೆ ಬಂದ ಸರ್ಕಾರ ಪ್ರಾಮಾಣಿಕವಾಗಿ ದುಡಿಯುವ ಅಹಿಂದ ನಾಯಕರಿಗೆ ಅಧಿಕಾರ ನೀಡುವ ವ್ಯವಸ್ಥೆ



ಮಾಡಬೇಕು. ಅಲ್ಲದೇ ಬಿಜೆಪಿಯ ಟೀಕೆಗಳಿಗೆ ಸಮರ್ಥವಾಗಿ ಉತ್ತರಿಸುವ ನಾಯಕನನ್ನು ಅಹಿಂದರ ಧ್ವನಿಯಾಗಿ ಗುರುತಿಸಿದಂತಾಗುತ್ತದೆ ಎಂದು ಹೇಳಿದ್ದಾರೆ.

**ಉದಯರಶ್ಮಿ ದಿನಪತ್ರಿಕೆ**

## ಸಕಾರಾತ್ಮಕ ಮನೋಭಾವವೇ ಇಲ್ಲದಿದ್ದರೆ ಏನಿದ್ದರೂ ವ್ಯರ್ಥ

ಒಮ್ಮೆ ಒಬ್ಬಳು ಗೃಹಿಣಿ ಎರಡು ಮಾವಿನ ಹಣ್ಣುಗಳನ್ನು ತಿಂದು ಅದರ ಗೊರಟುಗಳನ್ನು (ಓಟೆ) ತಿಪ್ಪೆ ಗುಂಡಿಗೆ ಬಿಸಾಡಿದಳು. ಆಗ ಒಂದನೆಯ ಗೊರಟು ಯೋಚನೆ

– ಸಂತೋಷ್ ರಾವ್ ಪೆರ್ಮುಡ,
ಪೆರ್ಮುಡ ಮನೆ, ಪಟ್ರಮೆ ಗ್ರಾಮ
ಮತ್ತು ಅಂಚೆ ಬೆಳ್ತಂಗಡಿ ತಾಲೂಕು,



ಮಾಡಿತು ನನ್ನ ಬೇರುಗಳು ಭೂಮಿಯೊಳಕ್ಕೆ ಹೋಗುತ್ತವೆ, ಅಂತರ್ಜಲವನ್ನು ಹೀರಿಕೊಳ್ಳುತ್ತವೆ, ತಿಪ್ಪೆಯು ಗೊಬ್ಬರ ಮತ್ತು ಪೌಷ್ಟಿಕಾಂಶ ಕೊಡುತ್ತದೆ, ಇದರಿಂದ ಸಸಿಯಾಗಿ ಸಣ್ಣ ಗಿಡವಾಗುತ್ತೇನೆ, ಕಾಲಂತರದಲ್ಲಿ ದೊಡ್ಡ ಮರವಾಗಿ ಬೆಳೆಯುತ್ತೇನೆ. ಮಾವಿನ ಸೊಪ್ಪು, ರುಚಿಕರವಾದ ಮಾವಿನ ಹಣ್ಣನ್ನು ಕೊಡುತ್ತೇನೆ. ನೂರಾರು ವರ್ಷಗಳು ಬದುಕುತ್ತೇನೆಂದು ಯೋಚಿಸಿ ಅದರಂತೆಯೇ ಬೆಳೆಯಿತು, ಮತ್ತು ಎಲ್ಲರಿಗೂ ಬೇಕಾದ ಮರ ಮತ್ತು ಹಣ್ಣಾಗಿ ಪರೋಪಕಾರಿಯಾಗಿ ಬಾಳಿ ಬದುಕಿತು.


ಅದರ ಪಕ್ಕದಲ್ಲೇ ಇದ್ದ ಎರಡನೆಯ ಗೊರಟು ನನ್ನ ಬೇರುಗಳಿಗೆ ಅಂತರ್ಜಲ ಸಿಗದಿದ್ದರೆ? ಪೌಷ್ಟಿಕಾಂಶ ಸಿಗದಿದ್ದರೆ? ಗಿಡವಾದಾಗ ಹಸು, ಕುರಿ ಮೇಕೆಗಳು ಬಂದು ತಿಂದರೆ, ಮರವಾಗಿ ಹಣ್ಣು ಬಿಡುವಾಗ, ಜನ ಹಣ್ಣು ಉದುರಿಸಲು ನನಗೆ ಕಲ್ಲು ಹೊಡೆದರೆ ನನಗೆ ನೋವಾಗುದಿಲ್ಲವೇ? ಎಂದೆಲ್ಲ ಯೋಚಿಸಿ ಬೇರನ್ನು ಕೆಳಗೆ ಬಿಡದೆ, ಮೇಲೆ ಸಸಿಯಾಗಿ ಬೆಳೆಯದೆ ಹಾಗೆಯೇ ಉಳಿದು ಬಿಟ್ಟಿತು. ಕೆಲವೇ ದಿನಗಳಲ್ಲಿ ತಿಪ್ಪೆಯಲ್ಲಿನ ಗೊಬ್ಬರದೊಂದಿಗೆ ಗೊರಟೂ ಗೊಬ್ಬರವಾಗಿ ಬೆರೆತು ಹಾಳಾಗಿ



ಹೋಯಿತು.

ಮೊದಲನೆಯ ಗೊರಟಿನ ಮನೋಭಾವ ಸಕಾರಾತ್ಮಕವಾಗಿತ್ತು. ಎರಡನೆಯ ಗೊರಟಿನ ಮನೋಭಾವ ನಕಾರಾತ್ಮಕವಾಗಿತ್ತು. ಸಕಾರಾತ್ಮಕವಾಗಿ ಯೋಚಿಸಿದ ಗೊರಟು ಮೊಳಕೆಯೊಡೆದು, ಗಿಡವಾಗಿ, ಮರವಾಗಿ ಬೆಳೆದು ದಶಕಗಳ ಕಾಲ ಬದುಕಿತು. ಆದರೆ ಕೇವಲ ನಕಾರಾತ್ಮಕವಾಗಿಯೇ ಯೋಚಿಸುತ್ತಿದ್ದ ಗೊರಟು ಒಂದೆರಡು ವಾರಗಳಲ್ಲೇ ತನ್ನ ಅಸ್ತಿತ್ವವೇ ಇಲ್ಲದಂತೆ ಮರೆಯಾಗಿ ಹೋಯಿತು. ನಮ್ಮ ಜೀವನದಲ್ಲೂ ಸಹ ನಮ್ಮ ಬಳಿ ಬುದ್ದಿವಂತಿಕೆ, ಜ್ಞಾನ, ಪ್ರತಿಭೆ, ಅವಕಾಶಗಳು ಎಲ್ಲವೂ ಇರಬಹುದು ಅಥವಾ ಇಲ್ಲದಿರಬಹುದು. ಆದರೆ ಸಕಾರಾತ್ಮಕ ಮನೋಭಾವವೇ ಇಲ್ಲದಿದ್ದರೆ, ಏನಿದ್ದರೂ ಅವೆಲ್ಲವೂ ವ್ಯರ್ಥವಾಗುತ್ತವೆ.

ಗಾಳಿಪಟಕ್ಕೆ ಆಕಾಶದೆತ್ತರಕ್ಕೆ ಏರುವ ಮನೋಭಾವವೇ ಗಾಳಿಪಟಕ್ಕೆ ಇಲ್ಲದಿದ್ದರೆ ಒಳ್ಳೆಯ ಹವಾಮಾನವಿದ್ದರೆ ಏನೂ ಫಲವಿಲ್ಲ ಮತ್ತು ಅದು ಮೇಲೇರಲು ಸಾಧ್ಯವಿಲ್ಲ. ಅವಕಾಶಗಳು ಎಲ್ಲರ ಜೀವನದಲ್ಲೂ ಬಂದೇ ಬರುತ್ತವೆ. ಆದರೆ ಸಕಾರಾತ್ಮಕವಾಗಿ ಬದುಕುವವರು ಅವಕಾಶಗಳನ್ನು ಹುಡುಕುತ್ತಾರೆ, ಹುಡುಕಿ ಗಳಿಸಿಕೊಳ್ಳುತ್ತಾರೆ. ನಕಾರಾತ್ಮಕವಾಗಿ ಯೋಚಿಸುವವರು ಸದಾ ಪ್ರತಿಯೊಂದನ್ನೂ ಸಂಶಯದಿಂದ ನೋಡುತ್ತಾರೆ. ಸಮಸ್ಯೆಗಳು ಪ್ರತಿಯೊಬ್ಬರಿಗೂ ಇದ್ದಿದ್ದೇ, ಬದುಕಲ್ಲಿ ಸೋಲುಗಳು ಎದುರಾಗುತ್ತವೆ ಆದರೆ ಸಕಾರಾತ್ಮಕವಾಗಿ ಯೋಚಿಸುವವರು ಬಿದ್ದಲ್ಲೇ ಮತ್ತೆ ಎದ್ದು ಏನೂ ಆಗಿಲ್ಲವೆಂಬಂತೆ ಮುಂದುವರೆಯುತ್ತಾರೆ. ಕವಿ ಶ್ರೀ ಅಸಾದುಲ್ಲಾ ಬೇಗ್‌ರವರು ತನ್ನ ಕವನದಲ್ಲಿ ಹೇಳುತ್ತಾರೆ ಹವ್ಯಾಸವನ್ನು ಬದಲಿಸಿಕೊಂಡರೆ ಹಣೆಬರಹ ಬದಲಾದೀತು. ನೋಡುವ ದೃಷ್ಟಿಯನ್ನು ಬದಲಿಸಿಕೊಂಡರೆ ಕಾಣುವ ದೃಶ್ಯವೇ ಬದಲಾದೀತು, ದೋಣಿಯನ್ನೇ ಬದಲಿಸಬೇಕಾಗಿಲ್ಲ ಬದಲಿಗೆ




ಸಾಗುವ ದಿಕ್ಕನ್ನು ಬದಲಿಸಿಕೊಂಡರೆ ಸಾಕು ದಡವನ್ನು ತಲುಪಬಹುದು ಎಂದು. ನಾವೂ ನಮ್ಮ ವೃತ್ತಿ ಮತ್ತು ವೈಯಕ್ತಿಕ ಜಿವನದಲ್ಲಿ ಸಕಾರಾತ್ಮಕವಾಗಿ ಯೋಚಿಸಿ ಕೆಲಸ ಮಾಡಿದರೆ ನಮ್ಮ ಫಲಿತಾಂಶವೂ ಧನಾತ್ಮಕವಾಗಿ ಬದಲಾಗುತ್ತದೆ. ಆದ್ದರಿಂದಲೇ ನಮ್ಮ ಹವ್ಯಾಸವನ್ನು ಬದಲಿಸಿಕೊಂಡರೆ ನಮ್ಮ ಹಣೆಬರಹವೇ ಬದಲಾಗಬಹುದು ಎಂದು ತಿಳಿದವರು ಹೇಳಿದ್ದಾರೆ.



## ಕಾಂಬೋಡಿಯಾ ಓಪನ್ ಪ್ಯಾರಾ ಬೋಲಿಂಗ್ ಚಾಂಪಿಯನ್‌ಶಿಫ್‌ಗೆ ಆಯ್ಕೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಬಳಿಯ ಭೂತನಾಳ ತಾಂಡಾದ ಸುನೀಲ ತಂ.ರೂಪಸಿಂಗ ರಾಠೋಡ ಇವರು ಜೂ. 21ರಿಂದ 27 ರವರೆಗೆ ನಡೆಯಲಿರುವ Tenpin Para Bowling ಅಂತರಾಷ್ಟ್ರೀಯ Comodiya Open Para Bowling Championship 2024 ರಲ್ಲಿ ನಡೆಯಲಿರುವ ಕ್ರೀಡೆಗೆ ಆಯ್ಕೆಯಾಗಿ ತೆರಳುತ್ತಿದ್ದು, ಇದಕ್ಕಿಂತ ಮುಂಚೆ ರಜ್ಯ, ರಾಷ್ಟ್ರೀಯ ಮತ್ತು 3 ಬಾರಿ ಅಂತರಾಷ್ಟ್ರೀಯ Para Olympic Commitee of India ದಿಂದ ಆಯ್ಕೆಯಾಗಿ ದುಬೈ ಸಾರಜಾತದಲ್ಲಿ ನಡೆದ World was ಗೆ ಆಯ್ಕೆಯಾಗಿ 4ನೇ ಸ್ಥಾನವನ್ನು ಪಡೆದಿರುತ್ತಾರೆ. ಇತ್ತೀಚಿಗೆ ಬೆಂಗಳೂರಿನಲ್ಲಿ ನಡೆದ



4ನೇ ಪ್ಯಾರಾ ಟೆನಪಿನ್ ನ್ಯಾಷನಲ್ ಚಾಂಪಿಯನಶೀಫ್‌ನಲ್ಲಿ ತೃತೀಯ ಸ್ಥಾನ ಪಡೆದು, ಅಂತರಾಷ್ಟ್ರೀಯ ಕಾಂಬೋಡಿಯಾ ಅಂತರಾಷ್ಟ್ರೀಯ ಕ್ರೀಡೆಗೆ ಆಯ್ಕೆಯಾಗಿ ತೆರಳುತ್ತಿದ್ದಾರೆ. ಅಲ್ಲದೇ ವಿಜಯಪುರ ನಗರ, ವಿಜಯಪುರ ಜಿಲ್ಲೆ ಕೀತಿರ್ಯನ್ನು ಹೆಚ್ಚಿಸಿರುತ್ತಾರೆ.

ಅಲ್ಲದೇ ಇವರು ಕ್ರೀಡೆಯಲ್ಲೂ ಭಾಗವಹಿಸಲು ಸಹಾಯ ಮಾಡಿದ ಶ್ರೀ ಸತ್ಯನಾರಾಯಣ ಸರ್ ಪ್ಯಾರಾ ಓಲಪಿಂಕ ಕಮೀಟಿ ಚೇರಮನ್ ಮತ್ತು ಸುರರ್ಜಿತಸಿಂಗ್ ಏಸಿಯನ್ ಮೆಡಲಿಸ್ಟ್ ಹಾಗೂ ಓಲಪಿಂಕ ಪದಕ ವಿಜೇತ ಎಚ್.ಎನ್.ಗಿರೀಶ ಹಾಗೂ ಕಾಮನವೆಲ್ಲ ಮೆಡಲಿಸ್ಟ್ ರಾಘವೇಂದ್ರ ಪಿ. ಮತ್ತು ಸುರೇಶ ಪೆನಪಿನ್ ಸೆಕ್ರೇಟರಿ ಮತ್ತು ದಿವಾಕರ ಇಂಟರನ್ಯಾಶನಲ್ ಕೋಚ ಇವರೆಲ್ಲರೂ ಸಹಾಯ ಮಾಡಿರುತ್ತಾರೆ.

ಕಾರಣ Comodiya Open Para Bowling Championship 2024 ದಲ್ಲಿ ಗೆದ್ದು ಬರಲು ವಿಜಯಪುರ ಜಿಲ್ಲೆಯವರಾದ ಅನೀಲ ರಾಠೋಡ (ಸಮಾಜ ಸೇವಕ), ಕಿರಣ ರಾಠೋಡ, ರಾಹುಲ ರಾಠೋಡ (ಜಿಮ್ ಕೋಚ್), ಜೀತು ಚವ್ಹಾಣ ಶುಭ ಕೋರಿದ್ದಾರೆ.

## ಪ್ರಜ್ವಲ್ ರೇವಣ್ಣ ಇರುವ ಸ್ಥಳ ಸರ್ಕಾರಕ್ಕೆ ಗೊತ್ತಿದೆ! :ರಾಜಣ್ಣ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಸಿದ ಆರೋಪ ಎದುರಿಸುತ್ತಿರುವ ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರು ಎಲ್ಲಿ ಅಡಗಿದ್ದಾರೆ ಎಂಬ ಮಾಹಿತಿ ಖಚಿತ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಗೊತ್ತಿದೆ ಎಂದು ಸಹಕಾರ ಸಚಿವರೂ ಆಗಿರುವ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್ ರಾಜಣ್ಣ ಬಾಂಬ್ ಸಿಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಕೆಎನ್ ರಾಜಣ್ಣ ಅವರು, ಪ್ರಜ್ವಲ್ ರೇವಣ್ಣ ಸಂಸದರಾಗಿರುವ ಕಾರಣ ಅವರು ಎಲ್ಲಿದ್ದಾರೆ ಎಂದು ಎಲ್ಲರಿಗೆ ಗೊತ್ತಿದೆ. ಆತ



ಎಲ್ಲಿದ್ದಾನೆ ಅಂತ ಸರ್ಕಾರಕ್ಕೂ ಗೊತ್ತು, ಕೇಂದ್ರಕ್ಕೂ ಗೊತ್ತು. ಎಸ್‌ಐಟಿ ಪೊಲೀಸರಿಗೂ ಗೊತ್ತು. ಪಾಸ್‌ಪೋರ್ಟ್ ರದ್ದು ಏಕಾಏಕಿ ಆಗಲ್ಲ, ಅವಕಾಶ ಮಾಡಿಕೊಡಬೇಕು. ಕಾನೂನಿನ ಲೋಪವಾಗದಂತೆ ನೋಡಿಕೊಳ್ಳಲಾಗುತ್ತಿದೆ ಎಂದು ರಾಜಣ್ಣ ಹೇಳಿದ್ದಾರೆ.

# ಮುಂದಿನ ದಿನಗಳಲ್ಲಿ ಕಾಂಗ್ರೆಸ್ ನಿರ್ನಾಮ :ಜಿ.ಟಿ.ದೇವೇಗೌಡ



ಉದಯರಶ್ಮಿ ನ್ಯೂಸ್

ಮಂಡ್ಯ: ಬಿಜೆಪಿ ಮತ್ತು ಜೆಡಿ–ಎಸ್ ಹೊಂದಾಣಿಕೆ ಆಗಬಾರದು ಎನ್ನುವ ಉದ್ದೇಶದಿಂದಲೇ ರಾಜ್ಯದಲ್ಲಿ ಕಾಂಗ್ರೆಸ್ ಅವಾಂತರಗಳನ್ನು ಸೃಷ್ಟಿಸುತ್ತಿದೆ, ಆದರೆ ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸಂಪೂರ್ಣವಾಗಿ ನಿರ್ನಾಮ ಆಗಲಿದೆ ಎಂದು ಶಾಸಕ ಜಿ.ಟಿ.ದೇವೇಗೌಡ ಭವಿಷ್ಯ ನುಡಿದರು.

ಮಂಡ್ಯದ ವಿದ್ಯಾನಗರದಲ್ಲಿ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣಾ ಕಚೇರಿಯನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತದಲ್ಲಿ ಶಿಕ್ಷಣ ಕ್ಷೇತ್ರವು ಗಣನೀಯವಾಗಿ ಕುಸಿದಿದೆ, ಭಾರತದ ದೇಶದ ಭವಿಷ್ಯ ಚಿತ್ರಣವನ್ನು ನೋಡಿದ್ದೇವೆ, ಆದರೆ ಕರ್ನಾಟಕದ ಚಿತ್ರಣವನ್ನು ನೋಡುತ್ತಿದ್ದೇವೆ, ಏಕೆಂದರೆ ಐದು ಗ್ಯಾರಂಟಿಯನ್ನು ಕೊಟ್ಟ ಕಾಂಗ್ರೆಸ್ ಸರ್ಕಾರವು ವಿದ್ಯಾರ್ಥಿಗಳಿಗೆ ಬಸ್ ವ್ಯವಸ್ಥೆ ಏನಾಗಿದೆ ಎಂಬುದನ್ನು ನೋಡುತ್ತಿದ್ದೀರ ಎಂದು ತಿಳಿಸಿದರು.

ಶಿಕ್ಷಣ ಕ್ಷೇತ್ರಕ್ಕೆ ಎಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಿದ್ದಾಗ ಒತ್ತು ನೀಡಿದ್ದರು, ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿಯನ್ನೇ ಮಾಡಿದ್ದರು, ಅದರಂತೆ ಯಡಿಯೂರಪ್ಪ ಅವರು ಕೂಡ ಶಿಕ್ಷಣ ಕ್ಷೇತ್ರಕ್ಕೆ ಶ್ರಮಿಸಿದ್ದಾರೆ, ನಾನು ಸಹ ಮಂತ್ರಿಯಾಗಿದ್ದಾಗ ಶಾಲೆಗಳಲ್ಲಿ ಲೈಬ್ರರಿ, ಶೌಚಾಲಯ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ನೀಡಿದ್ದೇನೆ, ನನ್ನ ಅವಧಿಯಲ್ಲಿ ಯಾರನ್ನೂ ವರ್ಗಾವಣೆ ಮಾಡಲು ಮತ್ತು ಅವಮಾನತು ಮಾಡಲು ಬಿಡಲಿಲ್ಲ ಎಂದು ಹೇಳಿದರು.

**ವಿವೇಕಾನಂದರನ್ನು ಬೆಂಬಲಿಸಲು ಮನವಿ**

ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿರುವ ಕೆ.ವಿವೇಕಾನಂದ ಅವರಿಗೆ ಶಿಕ್ಷಕರು ತಮ್ಮ ಅಮೂಲ್ಯವಾದ ಮತಗಳನ್ನು ನೀಡಿ ಜಯಶೀಲರನ್ನಾಗಿ ಮಾಡಬೇಕು. ಅವರು ಒಂದು ಗುರಿಯನ್ನಿಟ್ಟುಕೊಂಡಿದ್ದಾರೆ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದೆ. ಏಕೆಂದರೆ ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ಹಾಗೂ ಬಿ.ಎಸ್.ಯಡಿಯೂರಪ್ಪ, ಬಿ.ವೈ.ವಿ–ಜಯೇಂದ್ರ ಅವರು ಇದ್ದಾರೆ ಯಾರೂ ಸಹ ಯೋಚನೆ ಮಾಡಬೇಡಿ, ನಿಮ್ಮ ಕ್ಷೇತ್ರವು ಅಭಿವೃದ್ಧಿ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ನರೇಂದ್ರ ಮೋದಿ ಅವರು ಮತ್ತು ಎಚ್.ಡಿ.ದೇವೇಗೌಡ ಅವರು ಒಟ್ಟಿಗೆ ಕುಳಿತು ವೇದಿಕೆ ಹಂಚಿಕೊಂಡಾಗಲೇ ಕಾಂಗ್ರೆಸ್‌ನವ–ರಿಗೆ ಹೊಟ್ಟೆಕಿಚ್ಚು ಹುಟ್ಟಿಕೊಂಡಿತು, ಯಾವುದೇ ಕಾರಣಕ್ಕು ಬಿಜೆಪಿ ಮತ್ತು ಜೆಡಿಎಸ್ ಹೊಂದಾಣಿಕೆ ಆಗುವುದಕ್ಕೆ ಬಿಡಬಾರದು ಎಂಬುವ ಉದ್ದೇಶದಿಂದಲೇ ಇಷ್ಟೆಲ್ಲಾ ಅವಾಂತರಗಳನ್ನು ರಾಜ್ಯದಲ್ಲಿ ಮಾಡುತ್ತಿದ್ದಾರೆ, ಆದರೆ ಇಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ಆಗಲಿ, ಅಮಾಯಕರನ್ನು ಬಲಿ ತೆಗೆದುಕೊಳ್ಳುವ ಕೆಲಸ ಇನ್ನಾದರೂ ನಿಲ್ಲಬೇಕು ಎಂದು ಆಗ್ರಹಿಸಿದರು.

ಮೈತ್ರಿ ಅಭ್ಯರ್ಥಿ ಕೆ.ವಿವೇಕಾನಂದ ಮಾತನಾಡಿ, ಕಳೆದ 20 ವರ್ಷಗಳಿಂದ ಸತತವಾಗಿ ಸಾಮಾನ್ಯ ಕಾರ್ಯಕರ್ತನಾಗಿ ಕೆಲಸ ಮಾಡಿಕೊಂಡು ಬರುತ್ತಿದ್ದೇನೆ, ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ಅವರು ಹಾಕಿಕೊಟ್ಟ ಹಾದಿಯಲ್ಲಿ ಸಾಗುತ್ತಿದ್ದೇನೆ, ಅದರಂತೆ ಮೈತ್ರಿ ಮಾಡಿಕೊಂಡ ನಂತರ ನರೇಂದ್ರ ಮೋದಿ ಅವರ ಕಾರ್ಯವೈಖ–ರಿಯನ್ನು ಮೆಚ್ಚಿಕೊಂಡಿರುವ ನಾನು, ಶಿಕ್ಷಕರ ಕ್ಷೇತ್ರಕ್ಕೆ ಶಕ್ತಿ ಮೀರಿ ಕೆಲಸ ಮಾಡುತ್ತೇನೆ, ಶಿಕ್ಷಕರು ಮೊದಲ ಪ್ರಾಶಸ್ತ್ಯ ಮತ ನೀಡುವ ಮೂಲಕ ಒಂದೇ ಒಂದು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು.

ಉದಯರಶ್ಮಿ

ಪ್ರತಿ ಮನೆ-ಮನದ ಸಂಗಾತಿ






ಬೆಂಗಳೂರು ಬಿಜೆಪಿ ಕಚೇರಿಯಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಟೀಕೆ

# 2 ಲಕ್ಷಕ್ಕೂ ಅಧಿಕ ರೈತರ ಖಾತೆಗಳಿಗೆ ಬಾರದ ಬರಗಾಲ ಪರಿಹಾರಧನ

ಉದಯರಶ್ಮಿ ನ್ಯೂಸ್



ಬೆಂಗಳೂರು: ಕೇಂದ್ರ ಸರಕಾರವು ಸಾವಿರಾರು ಕೋಟಿ ರೂ. ಬರಗಾಲದ ಪರಿಹಾರಧನ ಕೊಟ್ಟಿದೆ. ಆದರೂ, ದೇವರು ಕೊಟ್ಟರೂ ಕೂಡ ಪೂಜಾರಿ ಕೊಡಲು ತಯಾರಿಲ್ಲ ಎಂಬಂತೆ ಕೇಂದ್ರ ಸರಕಾರ, ನರೇಂದ್ರ ಮೋದಿಯವರು ಬರಗಾಲದ ಮೊತ್ತವನ್ನು ಕೊಟ್ಟಿದ್ದರೂ ಅದನ್ನು ಸುಮಾರು 2 ಲಕ್ಷಕ್ಕಿಂತ ಹೆಚ್ಚು ರೈತರ ಖಾತೆಗಳಿಗೆ ಇವತ್ತಿಗೂ ನೀಡಿಲ್ಲ ಎಂದು ರಾಜ್ಯ ರೈತ ಮೋರ್ಚಾ ಅಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಅವರು ಟೀಕಿಸಿದರು.

ಈ ಕುರಿತು ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರಕಾರವು ರೈತರ ಪಾಲಿಗೆ ಸತ್ತು ಹೋಗಿದೆ. ಕಳೆದ ಸುಮಾರು ಒಂದು ವರ್ಷದಿಂದ ಬರಗಾಲದಿಂದ ತತ್ತರಿಸಿ ಹೋದ ರೈತರಿಗೆ ಸಹಾಯ ಮಾಡುತ್ತಿಲ್ಲ, ಇದು ರೈತರ ಪಾಲಿಗೆ ಸತ್ತು ಹೋದ ಸರಕಾರದಂತಿದೆ ಎಂದು ಹೇಳಿದರು.

ಬರಗಾಲದಿಂದ ಬೆಂದಿರುವ ರೈತರಿಗೆ ಅತ್ಯಂತ ಕಡಿಮೆ ದರದಲ್ಲಿ ಬಿತ್ತನೆ ಬೀಜವನ್ನು ವಿತರಿಸುವ ಕೆಲಸವನ್ನು ಈ ಸರಕಾರ ಮಾಡಬೇಕಿತ್ತು. ಆದರೆ, ಕಾಂಗ್ರೆಸ್ ಸರಕಾರವು ಬಿತ್ತನೆ ಬೀಜಕ್ಕೂ ಅತಿ ಹೆಚ್ಚು ದರ ವಿಧಿಸುತ್ತಿದೆ. ಇದನ್ನು ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ ಎಂದು ತಿಳಿಸಿದರು. ಈಗ ಮುಂಗಾರು ಸಂದರ್ಭದಲ್ಲಿ ಬೆಳೆಯುವ ಹೆಸರು, ಶೇಂಗಾ, ಉದ್ದು, ಮೆಕ್ಕೆಜೋಳ ಮೊದಲಾದವುಗಳ ದರವನ್ನು ಅತಿ ಹೆಚ್ಚು ಪ್ರಮಾಣದಲ್ಲಿ ಏರಿಸಿದ್ದಾರೆ ಎಂದು ಖಂಡಿಸಿದರು.

ಉದ್ದು ಪ್ರತಿ ಕೆಜಿಗೆ 43 ರೂ., ತೊಗರಿಗೆ 48 ರೂ., ಮೆಕ್ಕೆಜೋಳ 5 ಕೆಜಿ ಪೊಟ್ಟಣಕ್ಕೆ 24 ರೂ. ಹೆಚ್ಚಿಸಿದ್ದಾರೆ. ಸರಕಾರ ಈ ಹಿಂದಿನ ಬಿತ್ತನೆ ಬೀಜದ ದರವನ್ನೇ ಮುಂದುವರಿಸಬೇಕು. ಬಿತ್ತನೆ ಬೀಜ, ಗೊಬ್ಬರ ಸಮರ್ಪಕವಾಗಿ ಎಲ್ಲ ರೈತರಿಗೆ ಸಿಗುವಂತೆ ನೋಡಿಕೊಳ್ಳಲು ಆಗ್ರಹಿಸಿದರು.

ಕೊಬ್ಬರಿಯನ್ನು ಎಂಎಸ್‌ಪಿ ಅಡಿ ಖರೀದಿ ಮಾಡಲು ಕೇಂದ್ರದ ನರೇಂದ್ರ ಮೋದಿಜೀ ನೇತೃತ್ವದ ಸರಕಾರ ಮುಂದಾಗಿದೆ. ಪ್ರತಿ ಕ್ವಿಂಟಲ್‌ಗೆ ಸುಮಾರು 12 ಸಾವಿರ ರೂ. ಕೊಟ್ಟು ಖರೀದಿ ಅವಕಾಶ ನೀಡಿದ್ದು, ಈ ಸರಕಾರ ಚೀಲ ಇಲ್ಲ ಎಂಬ ನೆಪ ಹೇಳುತ್ತಿದೆ. ಇದು ಅತ್ಯಂತ ನಾಚಿಕೆಗೇಡು ಎಂದು ಆಕ್ಷೇಪ ಸೂಚಿಸಿದರು. ಈಗಾಗಲೇ ಖರೀದಿಸಿದ 35 ಸಾವಿರ ಟನ್ ಕೊಬ್ಬರಿಗೆ ಹಣವನ್ನೂ ನೀಡಿಲ್ಲ ಎಂದು ದೂರಿದರು.

ರೈತರು ಹಣ ಕೇಳಿದರೆ ಕೊಬ್ಬರಿ ತೆಗೆದುಕೊಂಡು ಹೋಗುವಂತೆ ಅಧಿಕಾರಿಗಳು ದರ್ಪದಿಂದ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು. ಕೊಬ್ಬರಿಗೆ ಸಂಬಂಧಿಸಿ ರೈತರಿಗೆ ಹಣ ನೀಡಬೇಕು. ಚೀಲ ಇಲ್ಲ ಎಂಬ ಕುಂಟು ನೆಪ ಬಿಟ್ಟು ಕೊಬ್ಬರಿ ಖರೀದಿ ಮುಂದುವ–ರಿಸಬೇಕು ಎಂದು ಆಗ್ರಹಿಸಿದರು.

ಹಿಂದೆ ಹೈನುಗಾರರಿಗೆ ನಮ್ಮ ಸರಕಾರ ಹಾಲು ಉತ್ಪಾದನೆಗೆ ಪ್ರೋತ್ಸಾಹಧನ ನೀಡುತ್ತಿತ್ತು. ಆದರೆ, ಈಗ ಹೈನುಗಾರಿಕೆಗೆ ಸಂಬಂಧಿಸಿ ಪ್ರತಿ ಲೀಟರ್‌ಗೆ 5 ರೂ. ಪ್ರೋತ್ಸಾಹಧನ ಸ್ಥಗಿತಗೊಂಡಿದೆ ಎಂದರಲ್ಲದೆ, ರೈತ–ರಿಗೆ ಬಾಕಿ ಇರುವ 700ರಿಂದ 800 ಕೋಟಿ ಸಹಾಯಧನವನ್ನು ಕೂಡಲೇ ಬಿಡುಗಡೆ ಮಾಡುವಂತೆ ಅವರು ಒತ್ತಾಯಿಸಿದರು.

ಪಶ್ಚಿಮ ಬಂಗಾಳದಲ್ಲಿ ಅತಿ ಹೆಚ್ಚು ವೋಟಿಂಗ್ । ದೆಹಲಿಯ ಎಲ್ಲ 7 ಕ್ಷೇತ್ರಗಳು ಸೇರಿದಂತೆ 58 ಕ್ಷೇತ್ರಗಳಲ್ಲಿ ಮತದಾನ । ಪಶ್ಚಿಮ ಬಂಗಾಳದ ಕೆಲವೆಡೆ ಹಿಂಸಾಚಾರ

# ಲೋಕಸಭೆ ಚುನಾವಣೆ: 6ನೇ ಹಂತ ಮುಕ್ತಾಯ :ಶೇ.58.82 ಮತದಾನ



ನವದೆಹಲಿ: ಲೋಕಸಭೆ ಚುನಾವಣೆ ಕ್ಲೈಮ್ಯಾಕ್ಸ್‌ನತ್ತ ಸಾಗುತ್ತಿದ್ದು, ರಾಷ್ಟ್ರ ರಾಜಧಾನಿ ದೆಹಲಿಯ ಎಲ್ಲಾ 7 ಕ್ಷೇತ್ರಗಳು ಸೇರಿದಂತೆ 58 ಕ್ಷೇತ್ರಗಳಲ್ಲಿ ಶನಿವಾರ 6ನೇ ಹಂತದ ಮತದಾನ ನಡೆದಿದೆ.

ಸಂಜೆ 5.30 ವರೆಗೆ ಶೇ. 58.82 ರಷ್ಟು ಮತದಾನವಾಗಿದ್ದು, ಪಶ್ಚಿಮ ಬಂಗಾಳದಲ್ಲಿ ಅತಿ ಹೆಚ್ಚು ಮತದಾನವಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ.

ರಾಜ್ಯವಾರು ಮತದಾನದಲ್ಲಿ ಪಶ್ಚಿಮ ಬಂಗಾಳದಲ್ಲಿ ಅತಿ ಹೆಚ್ಚು ಅಂದರೆ ಶೇ. 78 ರಷ್ಟು ಮತದಾನವಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ.

ಉತ್ತರ ಪ್ರದೇಶದ 14 ಸ್ಥಾನಗಳು, ಹರ್ಯಾಣದ ಎಲ್ಲಾ 10 ಸ್ಥಾನಗಳು, ಬಿಹಾರ ಮತ್ತು ಪಶ್ಚಿಮ ಬಂಗಾಳದಲ್ಲಿ ತಲಾ ಎಂಟು ಸ್ಥಾನಗಳು, ದೆಹಲಿಯ ಎಲ್ಲಾ ಏಳು ಸ್ಥಾನಗಳು, ಒಡಿಶಾದ 6 ಸ್ಥಾನಗಳು, ಜಾರ್ಖಂಡ್‌ನ 4 ಸ್ಥಾನಗಳು ಮತ್ತು ಜಮ್ಮು ಮತ್ತು ಕಾಶ್ಮೀರದ ಒಂದು ಸ್ಥಾನಕ್ಕೆ ಶನಿವಾರ ಬೆಳಗ್ಗೆ 7 ಗಂಟೆಗೆ ಮತದಾನ ಆರಂಭವಾಗಿತ್ತು. ಸಂಜೆ 6.30ರ ವರೆಗೂ ಮತದಾನಕ್ಕೆ ಅವಕಾಶ ನೀಡಲಾಗಿತ್ತು.



ಪಶ್ಚಿಮ ಬಂಗಾಳದ ಕೆಲವೆಡೆ ಹಿಂಸಾಚಾರ: ಪಶ್ಚಿಮ ಬಂಗಾಳದ ಎಂಟು ಲೋಕಸಭಾ ಕ್ಷೇತ್ರಗಳ ಕೆಲವು ಪ್ರದೇಶಗಳಲ್ಲಿ ಅಲ್ಲಲ್ಲಿ ಹಿಂಸಾಚಾರದ ಘಟನೆಗಳು ವರದಿಯಾಗಿವೆ. ಚುನಾವಣಾ ಆಯೋಗಕ್ಕೆ ವಿವಿಧ ರಾಜಕೀಯ ಪಕ್ಷಗಳಿಂದ ಬೆಳಗ್ಗೆ 11 ಗಂಟೆಯವರೆಗೆ 954 ದೂರುಗಳು ಬಂದಿದ್ದು, ಇವಿಎಂ ಅಸಮರ್ಪಕ ಕಾರ್ಯಗಳು ಮತ್ತು ಏಜೆಂಟ–ರನ್ನು ಬೂತ್‌ಗಳಿಗೆ ಪ್ರವೇಶಿಸದಂತೆ ತಡೆಯಲಾಗಿದೆ.

ಘಟಾಲ್ ಕ್ಷೇತ್ರದಲ್ಲಿ ಆಡಳಿತಾರೂಢ ಟಿಎಂಸಿ ಮತ್ತು ಬಿಜೆಪಿ ಬೆಂಬಲಿಗರ ನಡುವೆ ಮತಗಟ್ಟೆ ಏಜೆಂಟರನ್ನು ಬೂತ್‌ಗಳಿಗೆ ಪ್ರವೇಶಿಸುವುದನ್ನು ತಡೆಯುವ ಬಗ್ಗೆ ಘರ್ಷಣೆ ನಡೆದಿದೆ. ಟಿಎಂಸಿ ಗೂಂಡಾಗಳು ಮತದಾನ ಪ್ರಕ್ರಿಯೆಯಲ್ಲಿ ಅಡೆತಡೆಗಳನ್ನು ಸೃಷ್ಟಿಸುತ್ತಿದ್ದಾರೆ ಎಂದು ಬಿಜೆಪಿ ಅಭ್ಯರ್ಥಿ ಹಿರಣ್ ಚಟರ್ಜಿ ಹೇಳಿದ್ದಾರೆ. ಬಿಜೆಪಿ ಕಾರ್ಯಕರ್ತರು ರಸ್ತೆಗಿಳಿದು ಪ್ರತಿಭಟನೆ ನಡೆಸಿ ಟೈರ್‌ಗೆ ಬೆಂಕಿ ಹಚ್ಚಿ ಆಕ್ರೋಶ ವ್ಯಕ್ತಪಡಿಸಿದರು. ಮತದಾನ ಆರಂಭಕ್ಕೂ ಮುನ್ನ ಇಂದು ಒಡಿಶಾದಲ್ಲಿ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಗೆ ವಿವಿಧ ರಾಜ್ಯಗಳಲ್ಲಿ ಅಣಕು ಮತದಾನ ನಡೆಸಲಾಯಿತು.

ಒಡಿಶಾದ ನಲವತ್ತೆರಡು ವಿಧಾನಸಭಾ ಕ್ಷೇತ್ರಗಳಿಗೂ ಇಂದು ಮತದಾನ ನಡೆಯುತ್ತಿದೆ. ದೆಹಲಿ ಮತ್ತು ಹರಿಯಾಣದ ಎಲ್ಲಾ ಸಂಸದೀಯ ಸ್ಥಾನಗಳಿಗೆ ಈ ಹಂತದಲ್ಲಿ ಚುನಾವಣೆ ನಡೆಯುತ್ತಿದೆ.

ಕಣದಲ್ಲಿರುವ ಪ್ರಮುಖ ಅಭ್ಯರ್ಥಿಗಳಲ್ಲಿ ಇಬ್ಬರು ಮಾಜಿ ಮುಖ್ಯಮಂತ್ರಿಗಳಾದ ಮನೋಹರ್ ಲಾಲ್ ಖಟ್ಟರ್ ಮತ್ತು ಮೆಹಬೂಬಾ ಮುಫ್ತಿ ಸೇರಿದ್ದಾರೆ. ಖಟ್ಟರ್ ಅವರು ಕರ್ನಾಲ್‌ನಿಂದ ಬಿಜೆಪಿ ಅಭ್ಯರ್ಥಿಯಾಗಿ ಮತ್ತು ಮೆಹಬೂಬಾ ಮುಫ್ತಿ ಅನಂತನಾಗ್–ರಾಜೌರಿಯಿಂದ ಪಿಡಿಪಿ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದಾರೆ.

# ದೇಹವೇ ದೇಗುಲ




ಉದಯರಶ್ಮಿ ದಿನಪತ್ರಿಕೆ

ದೇವರೆಂದರೇ,

ಅರಿಶಿಣ ಕುಂಕುಮ ಹೂವು, ದೇವಸ್ಥಾನ ಕೆತ್ತಿದ ಮೂರ್ತಿ, ಹೋಮ ಹವನ ಅಕ್ಷತೆ ಮಂತ್ರ, ದೀರ್ಘ ದಂಡ ನಮಸ್ಕಾರ, ನಿಂಬೆಹಣ್ಣು ಹಾಲುತುಪ್ಪಗಳ ಸಮರ್ಪಣೆ ಅಷ್ಟೇನೇ..

ದೇವರಿಂದರೇ,

ಮಂದಿರ ಮಸೀದಿ ಚರ್ಚು, ನಮಾಜು ಗಡ್ಡ ಟೋಪಿ ಕ್ರಾಸು, ಪ್ರಾರ್ಥನೆ ಹಬ್ಬಗಳ ಆಚರಣೆ ಇಷ್ಟೇನೇ..

ದೇವರೆಂದರೇ,

ಪ್ರಕೃತಿಯು, ಸಮಾಜದ, ಬದುಕಿನ ಎಲ್ಲಾ ಆಗುಹೋಗುಗಳಿಗೆ ಯಾರೋ ಒಬ್ಬರನ್ನ ಹೊಣೆ ಮಾಡಿ ಸಮಾಧಾನಪಟ್ಟು, ಅದನ್ನು ಅನುಭವಿಸುತ್ತಾ ಯಾವುದೋ ನೆಪದಲ್ಲಿ ಮುನ್ನಡೆಯುತ್ತಾ, ಅಂತಿಮ ಯಾತ್ರೆ ಮುಗಿಸುವುದು ಅಷ್ಟೇನೇ..

ವಿಚಿತ್ರವೆನಿ ಸುತ್ತದೆ ಜನರ ನಡವಳಿಕೆಗಳು, ನಂಬಿಕೆಗಳು, ಆಚರಣೆಗಳು. ಸ್ವತಂತ್ರ ಚಿಂತನೆ ಇಲ್ಲ, ಸ್ವಾಭಾವಿಕ ವರ್ತನೆ ಇಲ್ಲ, ಸಮಗ್ರ ದೃಷ್ಟಿ ಕೋನವಿಲ್ಲ. ಕೊನೆಗೆ ತನ್ನ ಅಸ್ತಿತ್ವದ ಅರಿವೇ ಇಲ್ಲ..

ಮಾಡಬಾರದ್ದನ್ನೆಲ್ಲಾ ಮಾಡಿ, ಅಹಂಕಾರ ಮೆರೆದು, ಕೊಳಕು ಮನಸ್ಥಿತಿಯಲ್ಲಿ ಜೈಲಿಗೆ ಹೋಗಿ, ಜಾಮೀನಿನ ಮೇಲೆ ಬಿಡುಗಡೆಯಾಗಿ ಬಂದು, ದೇವಮಂದಿರಗಳಿಗೆ ಸುತ್ತು ಹೊಡೆದು, ವಿಧವಿಧವಾದ ಪೂಜೆ ಪುನಸ್ಕಾರಗಳನ್ನು ಮಾಡುತ್ತಾ, ಪಾಪ ಪರಿಹಾರ ಮಾಡಿಕೊಳ್ಳೋದು ಮತ್ತು ಶಿಕ್ಷೆಯಿಂದ ಪಾರಾಗುವ ಭರವಸೆಯೊಂದಿಗೆ ಆ ದೇವ–ರಿಗೇ ಮುಖವಾಡ ತೊಡಿಸುವುದು, ಅದನ್ನು ಮಾಧ್ಯಮಗಳು ಬಹಿರಂಗವಾಗಿ ವಿಜೃಂಭಿಸುವುದು ಎಷ್ಟೊಂದು ಅಜ್ಞಾನದ ಪರಮಾವಧಿ ಅಲ್ಲವೇ?

ಅರೆ, ಕನಿಷ್ಠ ನಮ್ಮ ಆತ್ಮ ಸಾಕ್ಷಿಯ ಒಂದಿನಿತು ಪ್ರಜ್ಞೆ ನಮ್ಮನ್ನು ಕಾಡಬಾರದೇ, ಪ್ರಕೃತಿಯ ಸಹಜ–ತೆ, ಶಿಕ್ಷಣದ ಕಲಿಕೆ ನಮ್ಮನ್ನು ನೈಜವಾಗಿ ಯೋಚಿಸುವಂತೆ ಮಾಡಬಾರದೇ?

ದೇಹವೇ ದೇಗುಲ..

ಹಾಗಾದರೆ,

ಆತ್ಮಸಾಕ್ಷಿ – ಆತ್ಮವಿಮರ್ಶೆ – ಆತ್ಮಾವಲೋಕನ – ಎಂದರೆ ಏನು ? ಅದಕ್ಕಿರುವ ಮಾನದಂಡಗಳೇನು ? ಅದನ್ನು ಸಾಧಿಸುವುದು ಹೇಗೆ ? ಅದಕ್ಕಾಗಿ ಅಧ್ಯಯನ ಚಿಂತನೆ ಜ್ಞಾನದ ಅವಶ್ಯಕತೆ ಇದೆಯೇ ?

“ ಎದೆಯ ದನಿಗೂ ಮಿಗಿಲಾದ ಶಾಸ್ತ್ರವಿವುದೇ “ ಎಂದು ಕುವೆಂಪು ಅವರು, “ ನಿನ್ನೊಂದಿಗೆ ನೀನು ಸದಾ ಮಾತನಾಡಿಕೋ “ ಎಂದು ಸ್ವಾಮಿ ವಿವೇಕಾನಂದರು, ಹೀಗೆ ವಿಶ್ವದ ಶ್ರೇಷ್ಠ ಚಿಂತಕರು ಆತ್ಮಾವಲೋಕನದ ಬಗ್ಗೆ ಸಾಕಷ್ಟು ಹೇಳಿದ್ದಾರೆ. ಬಹುಶಃ ನಾವೆಲ್ಲರೂ ಸರಿಯಾದ ಆತ್ಮವಿಮರ್ಶೆ ಮಾಡಿಕೊಂಡು ಬದುಕು ರೂಪಿಸಿಕೊಂಡರೆ ಅಥವಾ ನಮ್ಮ ನಮ್ಮ ನಡವಳಿಕೆ ನಿಯಂತ್ರಿಸಿಕೊಂಡರೆ ನಮ್ಮ ವೈಯಕ್ತಿಕ ಮತ್ತು ಸಾಮಾಜಿಕ ಜೀವನ ಒಂದಷ್ಟು ಸಹನೀಯ ಆಗುವ ಎಲ್ಲಾ ಸಾಧ್ಯತೆಗಳು ಇದೆ..

ಹುಟ್ಟಿನಿಂದ ಸಾಯುವವರೆಗಿನ ಸಮಯವನ್ನೇ ಎಲ್ಲಾ ಜೀವರಾಶಿಗಳ ಬದುಕು ಅಥ–ವಾ ಜೀವನ ಎಂದು ಸಹಜವಾಗಿ ಕರೆಯಲಾಗುತ್ತದೆ. ಈ ಅವಧಿಯಲ್ಲಿ ನಮ್ಮ ಬದುಕನ್ನು ಸುಖಮಯ ಅಥವಾ ಸಾರ್ಥಕ ಅಥವಾ ಹೆಚ್ಚು ನೆಮ್ಮದಿಯಿಂದ ಇರಲು ಅನುಸರಿಸಬೇಕಾದ ಹಲವಾರು ಮಾರ್ಗಗಳಲ್ಲಿ ಆತ್ಮವಿಮರ್ಶೆ ಸಹ ಮುಖ್ಯವಾದುದು..



ಆತ್ಮಾವಲೋಕನ ವ್ಯಾವಹಾ–ರಿಕವಲ್ಲ, ಆಧ್ಯಾತ್ಮಿಕವಲ್ಲ, ವಿಜ್ಞಾನವೂ ಅಲ್ಲ. ಅದು ಅತ್ಯಂತ ಸ್ವಾಭಾವಿಕ ಅಂತರ್ಯದ ಸ್ವಚ್ಛ ಮತ್ತು ಸ್ಫಟಿಕದಷ್ಟು ಶುಧ್ಧವಾದ ಒಂದು ಶೋಧನಾ ಕ್ರಿಯೆ. ಅದನ್ನು ಯಾವುದೇ ಜಾತಿ ಧರ್ಮ ಪ್ರದೇಶ ಮುಂತಾದ ಕಟ್ಟುಪಾಡುಗಳಿಗೆ ಒಳಪಡಿಸದೆ ಸೃಷ್ಟಿಯ ಮೂಲದಿಂದ ಪ್ರಾರಂಭಿಸಬೇಕು. ಆಗ ಅದಕ್ಕೆ ವಿಶಾಲ ವ್ಯಾಪ್ತಿ ದೊರೆಯುತ್ತದೆ ಮತ್ತು ಉತ್ತಮ ಫಲಿತಾಂಶ ಸಹ ನಿರೀಕ್ಷಿಸಬಹುದು..

ಸೃಷ್ಟಿಯ ಅಗಾಧತೆಯಲ್ಲಿ ನಾನು ಯಾರು, ನನ್ನ ಅಸ್ತಿತ್ವ ಏನು, ನನ್ನ ಮಹತ್ವ ಏನು, ನಾನಿರುವುದು ಎಲ್ಲಿ, ನನ್ನ ಸಂಬಂಧಗಳು ಯಾವುವು, ನನ್ನ ಸಮಾಜ ಯಾವುದು, ನನ್ನ ಮೇಲಿನ ನಿಯಂತ್ರಣ ವ್ಯವಸ್ಥೆ ಏನು, ನನಗಿರುವ ಅಧಿಕಾರ ಮತ್ತು ಸ್ವಾತಂತ್ರ್ಯ ಏನು, ನನ್ನ ಸುತ್ತಮುತ್ತಲಿನ ಜನರ ಸ್ವಭಾವ ಏನು, ನನ್ನ ಆಯಸ್ಸಿನ ಅಂ–ದಾಜು ಏನು, ದೇಹ ಮತ್ತು ಮನಸ್ಸಿನ ಬೇಕು ಬೇಡಗಳು ಏನು, ಅದನ್ನು ಪೂರೈಸಿಕೊಳ್ಳುವ ದಾರಿಗಳು ಯಾವುವು, ಅದಕ್ಕೆ ಇರುವ ಅಡ್ಡಿ ಆತಂಕಗಳು ಏನು, ಭೌತಿಕ ಮತ್ತು ಅಭೌತಿಕ, ನೈತಿಕ ಮತ್ತು ಅನೈತಿಕ ವಿಷಯಗಳನ್ನು ಸಮಾಜ ಹೇಗೆ ವಿಂಗಡಿಸಿದೆ, ನನ್ನ ದೇಹ ಮತ್ತು ಮನಸ್ಸಿನ ಸಾಮರ್ಥ್ಯ ಏನು ಹೀಗೆ ಈಗಿನ ಪರಿಸ್ಥಿತಿಯಲ್ಲಿ ಸಾಧ್ಯವಿರುವ ಮತ್ತು ಅರಿವಿರುವ ಎಲ್ಲವನ್ನೂ ಸಂಪೂರ್ಣ ನಮ್ಮ ತಿಳಿವಳಿಕೆಯ ಮಿತಿಯಲ್ಲಿ ವಿಮರ್ಶೆಗೆ ಒಳಪಡಿಸಿಕೊಳ್ಳಬೇಕು..

ಆಗ ನಮಗೆ ಅರ್ಥವಾಗುವ ನಮ್ಮ ಗ್ರಹಿಕೆಗೆ ಸಿಗುವ ನಾನು ಎನ್ನುವ ವ್ಯಕ್ತಿತ್ವವನ್ನು ಬದುಕಿಗೆ ಅಳವಡಿಸಿಕೊಳ್ಳುವ ಕ್ರಿಯೆಯೇ ಆತ್ಮಾವಲೋಕನ..



ಇಲ್ಲಿ ಮತ್ತೊಂದು ಮೆಟ್ಟಿಲು ಹತ್ತಬೇಕಾಗುತ್ತದೆ. ಬದುಕೆಂದರೆ ಏನು ? ನಾನು ಬದುಕುತ್ತಿರುವ ಸಮಾಜದಲ್ಲಿ ಬದುಕಿನ ಅರ್ಥವೇನು ? ಅದರ ಉದ್ದೇಶ – ಗುರಿ ಏನು ? ಬದುಕಿನ ಸಾರ್ಥಕತೆ ಹೇಗೆ ?

ನನ್ನ ಕ್ರಿಯೆ – ಪ್ರತಿಕ್ರಿಯೆಗಳು ಹೇಗಿರಬೇಕು ? ಸೋಲು ಗೆಲುವುಗಳನ್ನು ಹೇಗೆ ಸ್ವೀಕ–ರಿಸಬೇಕು. ಸಾವು – ನೋವುಗಳನ್ನು ಹೇಗೆ ಅರ್ಥಮಾಡಿಕೊಳ್ಳಬೇಕು ? ಯಶಸ್ಸು ಎಂದರೇನು ? ಯಾವುದು ಯಶಸ್ಸು ? ಸಮಾಜ ಯಾರನ್ನು ಗೌರವಿಸುತ್ತದೆ, ಯಾರನ್ನು ತಿರಸ್ಕ–ರಿಸುತ್ತದೆ, ಯಾರನ್ನು ದ್ವೇಷಿಸುತ್ತದೆ ?

ಹೀಗೆ ಸಾಗುವ ಪ್ರಶ್ನೆಗಳಿಗೆ ಉತ್ತರ ಹುಡುಕುತ್ತಾ ಸಾಗುವುದೇ ಆತ್ಮವಿಮರ್ಶೆ..

ಹಾಗಾದರೆ ಆತ್ಮಾವಲೋಕನ ಇಷ್ಟೊಂದು ಕಠಿಣವೇ ? ಗೊಂದಲವೇ ? ಎಂದು ಅನಿಸಬಹುದು. ಇಲ್ಲ ಆತ್ಮವಿಮರ್ಶೆ ಶರಣಾಗತಿಯಲ್ಲ, ಮಹತ್ವಾಕಾಂಕ್ಷೆಯುಲ್ಲ, ಅದು ಸಹಜ ಸ್ವಾಭಾವಿಕ ಅವಲೋಕನ. ನಮ್ಮ ಬದುಕಿನ ಗುಣಮಟ್ಟವನ್ನು ಹೆಚ್ಚಿಸಿಕೊಳ್ಳುವ ಒಂದು ಪ್ರಯತ್ನ. ಇದು ಇಲ್ಲದಿದ್ದರೂ ಬದುಕು ಸಾಗುತ್ತಲೇ ಇರುತ್ತದೆ. ಆದರೆ ಆತ್ಮಾವಲೋಕನದಿಂದ ನಮ್ಮ ನೋವುಗಳು, ಸಂಕಷ್ಟಗಳು ಕಡಿಮೆಯಾಗಿ ಬದುಕು ಭಾರವಾಗುವುದಿಲ್ಲ. ಉದ್ದೇಶಿತ ಗು–ರಿಗಳನ್ನು ತಲುಪಲು ಸುಲಭವಾಗುತ್ತದೆ. ಸಮಸ್ಯೆಗಳನ್ನು ಎದುರಿಸುವ ಸಾಮರ್ಥ್ಯ ಬೆಳೆಯುತ್ತದೆ..



ಬಹುಮುಖ್ಯವಾಗಿ ಹೊರಗಿನ ಯಾರೋ ವ್ಯಕ್ತಿಗಳು ಅಥವಾ ಶಕ್ತಿಗಳು ಅಥವಾ ಸಿದ್ಧಾಂತಗಳು ನಮ್ಮ ಮೇಲೆ ಕೆಟ್ಟ ಪ್ರಭಾವ ಬೀರಿ ( ಒಳ್ಳೆಯ ಪ್ರಭಾವ ಸ್ವೀಕಾರಾರ್ಹ ) ಅವುಗಳು ನಮ್ಮನ್ನು ನಿಯಂತ್ರಿಸುವ ಅಪಾಯದಿಂದ ನಮ್ಮನ್ನು ರಕ್ಷಿಸಿ, ನಮ್ಮದೇ ಸ್ವಂತ ಯೋಚನಾ ಶಕ್ತಿಯಲ್ಲಿ ಬದುಕನ್ನು ರೂಪಿಸಿಕೊಳ್ಳಲು ಆತ್ಮಾವಲೋಕನ ಅತ್ಯವಶ್ಯಕವಾಗಿದೆ..

ಇದಕ್ಕಾಗಿ ನೀವು ಬಹುದೊಡ್ಡ ಅಧ್ಯಯನ ಮಾಡಬೇಕಾಗಿಲ್ಲ, ಶ್ರಮ ಪಡಬೇಕಾಗಿಲ್ಲ, ದೀರ್ಘ ಸಮಯ ವ್ಯರ್ಥ ಮಾಡಬೇಕಾಗಿಲ್ಲ, ಹಣ ಖರ್ಚು ಮಾಡಬೇಕಾಗಿಲ್ಲ, ಇನ್ನೊಬ್ಬರ ಮೇಲೆ ಅವಲಂಬಿತರಾಗಬೇಕಿಲ್ಲ. ಕೇವಲ ಒಂದು ಪ್ರಶಾಂತ ಸ್ಥಳದಲ್ಲಿ ಸಮಯವಾದಾಗ ಒಂದಷ್ಟು ಏಕಾಗ್ರತೆಯಿಂದ ನೀವಿರುವ ಹಂತದಲ್ಲೇ ಸ್ವಲ್ಪ ಯೋಚಿಸಿದರೆ ಸಾಕು ಮತ್ತು ಇದನ್ನು ಆಗಾಗ ಮಾಡುತ್ತಲೇ ಇರಬೇಕು..

ಆಗ ಖಂಡಿತ ನೀವು ಯಾವುದೇ ಕ್ಷೇತ್ರದಲ್ಲಿ ಇದ್ದರೂ ನಿಮ್ಮ ಜೀವನಮಟ್ಟ ಸುಧಾರಿಸುವ, ಸ್ವಲ್ಪ ಮಟ್ಟಿಗೆ ಏನನ್ನಾದರೂ ಸಾಧಿಸುವ ಅಥವಾ ಕನಿಷ್ಠ ನಿಮ್ಮ ಕಷ್ಟಗಳು ಮಾನಸಿಕವಾಗಿ ಕಡಿಮೆಯಾಗುವ ಎಲ್ಲಾ ಸಾಧ್ಯತೆ ಇದೆ..

ಯಾರೋ ಆಧ್ಯಾತ್ಮಿಕ ಗುರುಗಳು ಅಥವಾ ಕಾರ್ಪೊರೇಟ್ ಸಂಸ್ಥೆಗಳು ನಡೆಸುವ ವ್ಯಕ್ತಿತ್ವ ವಿಕಸನ ಶಿಬಿರಗಳು ಅಥವಾ ಧಾರ್ಮಿಕ, ಆರ್ಥಿಕ, ಶೈಕ್ಷಣಿಕ, ದಲ್ಲಾಳಿಗಳ ಕೃತಕವಾದ ಮತ್ತು ಹಣ ನೀಡಿ ಪಡೆಯಬೇಕಾದ ಸಲಹೆ ಪರಿಹಾರಗಳಿಗಿಂತ ನಿಮ್ಮ ಅರಿವಿನ ಮಿತಿಯ ನಿಮ್ಮದೇ ಸ್ವಂತ ಆತ್ಮಾವಲೋಕನದಿಂದ ಸಿಗಬಹುದಾದ ಬದುಕಿನ ಹೊಳಹುಗಳು ಹೆಚ್ಚು ಅರ್ಥ–ಪೂರ್ಣ, ಪರಿಣಾಮಕಾರಿ ಮತ್ತು ಸ್ವಾಭಾವಿಕ.

ಸಾಧ್ಯವಾದರೆ ದಯವಿಟ್ಟು ಆತ್ಮವಿಶ್ವಾಸದಿಂದ ಪ್ರಯತ್ನಿಸಿ. ಇಲ್ಲಿ ಕಳೆದುಕೊಳ್ಳುವುದು ಏನೂ ಇಲ್ಲ. ಎಲ್ಲವೂ ಪಡೆದುಕೊಳ್ಳುವುದೇ ಆಗಿರುತ್ತದೆ..

## ರಾಜ್ಯ ಸರ್ಕಾರದ ಮೇಲೆ ಕಿಡಿಕಾರಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ

# ರಾಜ್ಯವನ್ನು ಅರಾಜಕತೆಯತ್ತ ಕೊಂಡೊಯ್ಯುತ್ತಿರುವ ಮುಸ್ಲಿಂ ಮತ ಓಲೈಕೆ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ದಾವಣಗೆರೆ ಜಿಲ್ಲೆಯ ಚನ್ನಗಿರಿ ಪೊಲೀಸ್ ಕಸ್ಟಡಿಯಲ್ಲಿ ಆರೋಪಿ ಸಾವು ಪ್ರಕರಣ ರಾಜ್ಯದಲ್ಲೆಡೆ ಸಾಕಷ್ಟು ಸುದ್ದಿಯಾಗಿದೆ. ಇದರ ಜೊತೆಗೆ ಆದಿಲ್ ಸಾವು ಸಹಜವಲ್ಲ ಎಂದು ಕುಟುಂಬಸ್ಥರು ಆರೋಪಿಸಿ ಪೊಲೀಸ್ ಠಾಣೆ ಮೇಲೆ ದಾಳಿ ಮಾಡಿದ್ದಾರೆ.

ಠಾಣೆಯ ಮುಂದಿದ್ದ ಧ್ವಜದ ಕಟ್ಟೆ ಸೇರಿದಂತೆ ಠಾಣೆಯ ಪೀಠೋಪಕರಣಗಳನ್ನು ಧ್ವಂಸಗೊಳಿಸಲಾಗಿದೆ. ಉದ್ರಿಕ್ತರು ಮನಬಂದಂತೆ ಕಲ್ಲು ತೂರಾಟ ನಡೆಸಿದ್ದಾರೆ. ಇದರಿಂದಾಗಿ ಹನ್ನೊಂದು ಮಂದಿ ಪೊಲೀಸ–ರಿಗೆ ಗಾಯಗಳಾಗಿವೆ. ಕಳೆದ ದಿನ ರಾತ್ರಿ ನಡೆದ ಘಟನೆಯ ದೃಶ್ಯಗಳು ಠಾಣೆಯ ಸಿಸಿಟಿವಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಈ ಬಗ್ಗೆ ಬಿಜೆಪಿ ರಾಜ್ಯಾಧ್ಯಕ್ಷ ರಾಜ್ಯ ಸರ್ಕಾರದ ಮೇಲೆ ಕಿಡಿಕಾರಿದ್ದಾರೆ.

ಈ ಬಗ್ಗೆ ಸಾಮಾಜಿ–ಕ ಜಾಲತಾಣಗಳಲ್ಲಿ ಬರೆದುಕೊಂಡಿದ್ದಾರೆ. "ರಾಜ್ಯದಲ್ಲಿ ಪೋಲೀಸರು ನಿಷ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ, ಪರಿಣಾಮವಾಗಿ ರಾಜ್ಯವನ್ನು ಉಗ್ರರು ಅಡಗುತಾಣವನ್ನಾಗಿ ಮಾಡಿಕೊಂಡಿದ್ದಾರೆ, ಮಾಫಿಯಾಗಳು, ರೌಡಿಗಳ ಅಟ್ಟಹಾಸ ಮೇರೆ ಮೀರಿದೆ" ಎಂದು ಹೇಳಿದ್ದಾರೆ.

"ಅಕ್ರಮ ರೇವ್ ಪಾರ್ಟಿಗಳು ಎಗ್ಗಿಲ್ಲದೆ ನಡೆಯುತ್ತಿವೆ. ಕ್ರಿಮಿನಲ್‌ಗಳನ್ನು ಬಂಧಿಸಲು ಹೊರಟರೆ ಮತೀಯ ಅಲ್ಪ ಸಂಖ್ಯಾತರ ಹೆಸರಿನಲ್ಲಿ ಪೋಲೀಸ್ ಠಾಣೆಗಳಿಗೆ ಬೆಂಕಿ ಹಾಕಲು ಈ ನೆಲದ ಕಾನೂನಿನ ಬಗ್ಗೆ ಕಿಂ–



ಚಿತ್ತು ಭಯವಿಲ್ಲದ ವಿಧ್ವಂಸಕ ಶಕ್ತಿಗಳು ಗುಂಪುಗೂಡಿ ಪೋಲಿಸ್ ಠಾಣೆಗಳಿಗೇ ದಾಳಿಮಾಡಿ ಬೆಂಕಿ ಹಚ್ಚಲು ಮುಂದಾಗುತ್ತಿವೆ. ಇದಕ್ಕೆಲ್ಲ ರಾಜ್ಯವಾಳುತ್ತಿರುವ ಕಾಂಗ್ರೆಸ್ ಸರ್ಕಾರವೇ ಕಾರಣವಾಗಿದೆ, ಮುಸ್ಲಿಂ ಮತ ಓಲೈಕೆ ಈ ರಾಜ್ಯವನ್ನು ಅರಾಜಕತೆಯತ್ತ ಕೊಂಡೊಯ್ಯುತ್ತಿದೆ" ಎಂದಿದ್ದಾರೆ.

"ರಾಮೇಶ್ವರಂ ಕೆಫೆ ಬಾಂಬ್ ಪ್ರಕರಣದಲ್ಲಿ ಬಂಧಿಯಾಗುತ್ತಿರುವ ಭಯೋತ್ಪಾದಕ ಶಕ್ತಿಗಳು ಈ ಘಟನೆಗಳ ಹಿಂದಿರುವ ಸಾಧ್ಯತೆ ತಳ್ಳಿಹಾಕುವಂತಿಲ್ಲ. ರಾಜ್ಯದಲ್ಲಿ ಕಾನೂನು ವ್ಯವಸ್ಥೆ ಕಲ್ಪಿಸಬೇಕಾದ ಪೋಲೀಸರು ಹಾಗೂ ಪೋಲೀಸ್ ಠಾಣೆಗೇ ರಕ್ಷಣೆ ಇಲ್ಲದ ಪರಿಸ್ಥಿತಿ ಉದ್ಭವಿಸಿದೇ ಎಂದರೆ ಪರಿಸ್ಥಿತಿ ಯಾವ ಹಂತ ತಲುಪುತ್ತಿದೆ ಎಂದು ಅಂದಾಜಿಸಬಹುದಾಗಿದೆ" ಎಂದು ಕಿಡಿಕಾರಿದ್ದಾರೆ.

"ಅಂದು ಡಿಜೆ ಹಳ್ಳಿ, ಮೊನ್ನೆ ಉಡುಪಿ, ಇಂದು ದಾವಣಗೆರೆಯ ಚೆನ್ನಗಿರಿಯಲ್ಲಿ ಪೊಲೀಸ್ ಠಾಣೆಗಳಿಗೆ ನುಗ್ಗಿ ಧ್ವಂಸಗೊಳಿಸುವ ಮಟ್ಟಿಗೆ ದಾಳಿ ನಡೆಸುವಷ್ಟು ಮೂಲಭೂತವಾದ ಶಕ್ತಿಗಳು ಸಂಘಟಿತರಾಗಿದ್ದಾರೆ ಎಂದರೆ ನಾವು ಯಾವ ರಾಜ್ಯದಲ್ಲಿದ್ದೇವೆ..? ಯಾವ ಸಮಾಜದಲ್ಲಿ ಇದ್ದೇವೆ..? ಎನ್ನುವ ಆತಂಕ ಕಾಡುತ್ತಿದೆ" ಎಂದಿದ್ದಾರೆ.

"ಬಿಹಾರದಲ್ಲಿ ಲಲ್ಲುಪ್ರಸಾದ್ ಯಾದವ್ ಆಡಳಿತ ನಡೆಸಿದ ದಿನಗಳು ಕರ್ನಾಟಕದಲ್ಲಿ ಮತ್ತೆ ತಲೆ ಎತ್ತುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. 'ಸರ್ವ ಜನಾಂಗದ ಶಾಂತಿಯ ತೋಟ' ಎಂದು ಕರೆದ ಕುವೆಂಪು ಕಲ್ಪನೆಯನ್ನು ಕೊಲ್ಲಲು ಹೊರಟಿರುವ ಕಾಂಗ್ರೆಸ್ ಸರ್ಕಾರ ಕರುನಾಡನ್ನು ಅಭದ್ರತೆಯ ಅಶಾಂತಿಯ ಕೊಂಪೆ ಮಾಡಲು ಹೊರಟಿದೆ. ಪೊಲೀಸರ ನೈತಿಕ ಶಕ್ತಿ ಸಂಪೂರ್ಣವಾಗಿ ಕುಗ್ಗಿಸುವ ವ್ಯವಸ್ಥೆಯ ಜಾಲ ಕೆಲಸ ಮಾಡುತ್ತಿದೆ" ಎಂದು ಆಕ್ರೋಶ ಹೊರಹಾಕಿದ್ದಾರೆ.

'ಪೊಲೀಸರು ಹಾಗೂ ಪೊಲೀಸ್ ಠಾಣೆಗಳೇ ರಕ್ಷಣೆಗೆ ಮೊರೆ ಇಡುವ ಪರಿಸ್ಥಿತಿ ಇರುವಾಗ ರಕ್ಷಣೆಗಾಗಿ ಜನರು ಯಾರ ಮೊರೆ ಹೋಗಬೇಕು ಎನ್ನುವುದು ತಿಳಿಯದಾಗಿದೆ. 'ಬೇಲಿಯೇ ಎದ್ದು ಹೊಲ ಮೇಯ್ದಂತೆ' ಪೊಲೀಸ್ ಬೇಲಿಯನ್ನೇ ಅಸ್ಥಿರಗೊಳಿಸಲು ಹೊರಟಿರುವ ಕಾಂಗ್ರೆಸ್ ಸರ್ಕಾರ ಮೂಲಭೂತವಾದಿ ಅಲ್ಪಸಂಖ್ಯಾತ–ರಿಗಾಗಿಯೇ ನಾವು ಆಡಳಿತ ನಡೆಸುವುದು, ಅವರ ಪರವಾಗಿ ನಿಲ್ಲುವುದು ಹಾಗೂ ಅವರ ಚಟುವಟಿಕೆಗಳಿಗೆ ಮುಕ್ತ ಸ್ವಾತಂತ್ರ್ಯ ಕಲ್ಪಿಸುವುದೇ ತಮ್ಮ ಧ್ಯೇಯ ಎಂದು ಘೋಷಿಸಿಬಿಡಲಿ. ಆಗ ಈ ಸರ್ಕಾರವನ್ನು ನೆಚ್ಚಿಕೊಳ್ಳದೇ ಜನ ಸ್ವಯಂ ರಕ್ಷಣೆ ಮಾಡಿಕೊಳ್ಳುತ್ತಾರೆ. ರಾಜ್ಯದ ಸದ್ಯದ ಬೆಳವಣಿಗೆಗಳು ಜನತೆಯ ಆತಂಕ ದಿನದಿಂದ ದಿನಕ್ಕೆ ಹೆಚ್ಚಿಸುತ್ತಿದೆ" ಎಂದು ತಿಳಿಸಿದ್ದಾರೆ.

"ಗೌರವಾನ್ವಿತ ರಾಜ್ಯಪಾಲರು ಈ ಕೂಡಲೇ ಮಧ್ಯ ಪ್ರವೇಶಿಸಿ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುರಿತು ಸರ್ಕಾರದಿಂದ ವರದಿ ಪಡೆಯಲಿ. ಅಂತೆಯೇ ಪೊಲೀಸ್ ಠಾಣೆಗಳಿಗೆ ದಾಳಿ ಮಾಡುತ್ತಿರುವ ಪರಿಸ್ಥಿತಿಯ ಹಿನ್ನೆಲೆಯಲ್ಲಿ ರಾಜ್ಯದ ಕಾನೂನು ಸುವ್ಯವಸ್ಥೆ ಸರಿ ದಾ–ರಿಗೆ ಬರಲು ರಾಜ್ಯಪಾಲರು ಮಧ್ಯಪ್ರವೇಶಿಸುವಂತೆ ಮನವಿ ಮಾಡುತ್ತೇನೆ" ಎಂದು ಆಗ್ರಹಿಸಿದ್ದಾರೆ.

# ದ್ವೇಷ ಭಾಷಣ: ಪ್ರಧಾನಿ ಮೋದಿ ವಿರುದ್ಧ ಖಾಸಗಿ ದೂರು ದಾಖಲು

**ಉದಯರಶ್ಮಿ ನ್ಯೂಸ್**

ಮುಸ್ಲಿಮರನ್ನು 'ನುಸುಳುಕೋರರು' ಎಂದು ಕರೆದಿದಲ್ಲದೆ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ದೇಶದ ಸಂಪತ್ತನ್ನು ಮುಸ್ಲಿಮರಿಗೆ ಮರು ಹಂಚಿಕೆ ಮಾಡುತ್ತದೆ" ಎಂದು ಪ್ರಚೋದನಾಕಾರಿ ಚುನಾವಣಾ ಭಾಷಣ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಬೆಂಗಳೂ–ರಿನ ಜನಪ್ರತಿನಿಧಿಗಳ ವಿಶೇಷ ಮ್ಯಾಜಿಸ್ಟ್ರೇಟ್ ನ್ಯಾಯಾಲಯದಲ್ಲಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಖಾಸಗಿ ದೂರು ದಾಖಲಾಗಿದೆ.

ಬೆಂಗಳೂರಿನ ಹೆಬ್ಬಾಳದ ನಿವಾಸಿ 32 ವರ್ಷದ ಝಿಯಾವುರಹ್ಮಾನ್ ನೊಮಾನಿ ಮೇ 23ರಂದು ಖಾಸಗಿ ದೂರು ಸಲ್ಲಿಸಿದ್ದು,"ಪ್ರಧಾನಿಯ ಭಾಷಣವು ಮುಸ್ಲಿಮರನ್ನು ನಿಂದಿಸುವಂತಿದೆ. ಈ ದೇಶದ ಸಂಪತ್ತನ್ನು ಲೂಟಿ ಹೊಡೆದ ನುಸುಳುಕೋರರಿಗೆ ಇಲ್ಲಿರುವ ಮುಸ್ಲಿಮರನ್ನು ಹೋಲಿಕೆ ಮಾಡುವಂತೆ ಉಳಿದ ಜನರನ್ನು ಪ್ರೇರೇಪಿಸುವಂತಿದೆ. ಹಾಗಾಗಿ, ಸಮಾಜದಲ್ಲಿ ದ್ವೇಷ ಹರಡಿದ, ಶಾಂತಿ ಭಂಗ ಉಂಟು ಮಾಡಿದ ಆರೋಪದ ಮೇಲೆ ಮೋದಿ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ದೂ–ರಿನಲ್ಲಿ ಕೋರಲಾಗಿದೆ.

ಏಪ್ರಿಲ್ 21, 2024ರಂದು ರಾಜಸ್ಥಾನದ ಬನ್ಸ್ವಾರದಲ್ಲಿ ನಡೆದಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ, ಸಮಾಜ ಮತ್ತು ಧರ್ಮಗಳ ನಡುವೆ ದ್ವೇಷ ಬಿತ್ತುವ, ಸಾರ್ವಜನಿಕ ಶಾಂತಿಗೆ ಭಂಗ ಹಾಗೂ ಕ್ರಿಮಿನಲ್ ಪ್ರಚೋದನೆ ನೀಡುವ ಭಾಷಣ ಮಾಡಿರುವ



ಆರೋಪಕ್ಕೆ ಸಂಬಂಧಿಸಿದಂತೆ ಐಪಿಸಿ ಸೆಕ್ಷನ್‌ಗಳಾದ 153ಎ, 153ಬಿ, 295ಎ, 503, 504, 505(2) ಅಡಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಪ್ರಕರಣ ದಾಖಲಿಸಲು ಅಮೃತಹಳ್ಳಿ ಠಾಣಾ ಪೊಲೀಸ–ರಿಗೆ ನಿರ್ದೇಶಿಸುವಂತೆ ಖಾಸಗಿ ದೂರಿನಲ್ಲಿ ಮನವಿ ಮಾಡಲಾಗಿದೆ.

ಪ್ರಧಾನಿ ಮೋದಿಯವರ ದ್ವೇಷ ಭಾಷಣದ ವಿಡಿಯೋ ಸಾಮಾಜಿಕ ಜಾಲತಾಣಗಳು ಸೇರಿದಂತೆ ಎಲ್ಲಾ ಮಾಧ್ಯಮಗಳಲ್ಲಿ ವ್ಯಾಪಕ ಪ್ರಚಾರ ಕಂಡಿದ್ದು, ಇದು ಪ್ರಕರಣದಲ್ಲಿ ಸಾಕ್ಷಿಯಾಗಿರುವ ಆರ್ ಕಲೀಮುಲ್ಲಾ ಅವರ ಗಮನಕ್ಕೂ ಬಂದಿದೆ. ಹೀಗಾಗಿ, ಏಪ್ರಿಲ್ 26ರಂದು ಅಮೃತಹಳ್ಳಿ ಠಾಣೆಗೆ ದೂರು ನೀಡಲಾಗಿತ್ತು. ಆದರೆ, ಅಮೃತಹಳ್ಳಿ ಪೊಲೀಸರು ಇದು ಭಾರತೀಯ ಚುನಾವಣಾ ಆಯೋಗದ ವ್ಯಾಪ್ತಿಗೆ ಒಳಪಡುವುದರಿಂದ ಎಫ್‌ಐಆರ್ ದಾಖಲಿಸಲಾಗದು ಎಂದು ಹಿಂಬರಹ ನೀಡಿದ್ದರು. ಇದಾದ ಬಳಿಕ ಏಪ್ರಿಲ್ 27ರಂದು ದೂರುದಾರ ನೊಮಾನಿ ಈಮೇಲ್ ಮೂಲಕ ಬೆಂಗಳೂರು ಪೊಲೀಸ್ ಆಯುಕ್ತರಿಗೆ ದೂರು ನೀಡಿದ್ದರು. ಅಲ್ಲಿಂದಲೂ ಸೂಕ್ತ ಸ್ಪಂದನೆ ದೊರೆಯದ ಹಿನ್ನೆಲೆ ಮೇ 23ರಂದು ನ್ಯಾಯಾಲಯದ ಮೆಟ್ಟಿಲೇರಲಾಗಿದೆ ಎಂದು ಖಾಸಗಿ ದೂರಿನಲ್ಲಿ ವಿವ–ರಿಸಲಾಗಿದೆ. ಪ್ರಕರಣದ ವಿಚಾರಣೆ ಮೇ 28ಕ್ಕೆ ನಿಗದಿಯಾಗಿದೆ.

ಏಪ್ರಿಲ್ 21ರಂದು ರಾಜಸ್ಥಾನದ ಬನ್ಸ್ವಾರದಲ್ಲಿ ನಡೆದಿದ್ದ ಬಿಜೆಪಿಯ ಅಭ್ಯರ್ಥಿ ಪರ ಪ್ರಚಾರ ಸಭೆಯಲ್ಲಿ ಭಾಷಣ ಮಾಡಿದ್ದ ಪ್ರಧಾನಿ ಮೋದಿ, "ನಮ್ಮ ತಾಯಂದಿರು, ಸಹೋದರಿಯರ ಬಂಗಾರದ ಲೆಕ್ಕ ಹಾಕುವುದಾಗಿ, ಅದರ ಬಗ್ಗೆ ಮಾಹಿತಿ ಪಡೆಯುವುದಾಗಿ, ನಂತರ ಸಂಪತ್ತನ್ನು ಮರು ಹಂಚಿಕೆ ಮಾಡುವುದಾಗಿ ಕಾಂಗ್ರೆಸ್ ಪ್ರಣಾಳಿಕೆ ಹೇಳುತ್ತದೆ. ಅದನ್ನು ಯಾರಿಗೆ ಹಂಚುತ್ತಾರೆ? ಮುಸ್ಲಿಮರು ದೇಶದ ಸಂಪತ್ತಿನ ಮೊದಲ ಹಕ್ಕುದಾರರು ಎಂದು ಮನಮೋಹನ್ ಸಿಂಗ್ ಸರ್ಕಾರ ಹೇಳಿತ್ತು. ಅದರ ಅರ್ಥ, ಹೆಚ್ಚು ಮಕ್ಕಳಿರುವವರಿಗೆ ನಿಮ್ಮ ಸಂಪತ್ತು ಹಂಚಿಕೆಯಾಗುತ್ತದೆ. ನುಸುಳುಕೋರರಿಗೆ ನಿಮ್ಮ ಸಂಪತ್ತು ಹಂಚಿಕೆಯಾಗುತ್ತದೆ. ನೀವು ಕಷ್ಟದಿಂದ ಸಂಪಾದಿಸಿದ ಹಣ ನುಸುಳುಕೋರರ ಪಾಲಾಗಬೇಕೆ? ಅದಕ್ಕೆ ನಿಮ್ಮ ಒಪ್ಪಿಗೆ ಇದೆಯೇ? ಎಂದಿದ್ದರು.

## ಕಾವ್ಯರಶ್ಮಿ

– ಸರೋಜಾದೇವಿ ನಿನ್ನೆಕರ್

("ನಮ್ಮ ಕಥಾ ಅರಮನೆ" ಬರಹಗಾರರು)




### ಒಲವ ಸಂಗಮ

ರವಿ ಭುವಿಯ ನಂಟಿನಂತೆ ನಮ್ಮ ಪ್ರೇಮ
ಬಿಡಿಸಲಾಗದ ಗಂಟಿದು ಒಲವ ಸಂಗಮ
ಜೀವ ಭಾವದೊಂದಿಗೆ ಬೇರೆತ ನಮ್ಮ ಪ್ರೀತಿ
ಎಂದೆಂದೂ ಆರದ ಪ್ರೇಮದ ಜ್ಯೋತಿ..

ನೀನಿರಲು ಜೊತೆಯಲಿ ಅದುವೆ ಸ್ವರ್ಗ
ನೀನಿಟ್ಟ ಹೆಜ್ಜೆಯೇ ನನ ಬಾಳ ಮಾರ್ಗ
ನಿತ್ಯವೂ ಮನದಲಿ ನಿನದೇ ಆರಾಧನೆ
ನೀನಿಲ್ಲದ ಅರೆಘಳಿಗೆಯು ಆಗದು ಸಹನೆ..

ಉಕ್ಕುತಿದೆ ಎದೆಯಲಿ ಪ್ರೇಮದ ಅಲೆ
ಹಾಕುವೆ ನಾ ನಿನಗೆ ಒಲವಿನ ಮಾಲೆ
ತುಂಬಿ ತುಳುಕುತಿದೆ ಪ್ರೀತಿ ಹೃದಯದಲಿ
ಸಂಗಾತಿಯಾಗು ಬಾ ದೇವರ ಸನ್ನಿಧಿಯಲಿ



# INDIA ಅಧಿಕಾರಕ್ಕೆ ಬಂದರೆ ಸಂವಿಧಾನದಲ್ಲಿ ಬದಲಾವಣೆ :ಮೋದಿ

ನವದೆಹಲಿ: ದೇಶದಲ್ಲಿ ಈಗಾಗಲೇ ಐದು ಹಂತದ ಚುನಾವಣೆಗಳು ಮುಗಿದಿದ್ದು, ಜೂನ್ 1ರಂದು ಕೊನೆಯ ಹಂತದ ಚುನಾವಣೆ ನಡೆಯಲಿದೆ. ಜೂನ್4 ರಂದು ಚುನಾವಣಾ ಫಲಿತಾಂಶ ಹೊರ ಬೀಳಲಿದೆ. ಇದರ ಬೆನ್ನಲೆ ಕೊನೆಯ ಹಂತದ ಚುನಾವಣಾ ಪ್ರಚಾರಕ್ಕೆ ಈಗ ಚುರುಕು ಸಿಕ್ಕಿದ್ದು, ಪ್ರಧಾನಿ ನರೇಂದ್ರ ಮೋದಿ ಶನಿವಾರ ಬಿಹಾರದಲ್ಲಿ ಭರ್ಜರಿ ಮತ ಬೇಟೆ ನಡೆಸಿದ್ದಾರೆ.

ಚುನಾವಣೆಗಳ ಅಂದರೆ ವಾಕ್ ಸಮರ ನಡೆಯುವುದು ಕಾಮನ್. ಅದರಲ್ಲೂ ಸಮುದಾಯವನ್ನು ಎಳೆದು ತಂದು ರಾಜಕೀಯ ಮಾಡುವುದು ಹೊಸತಲ್ಲ. ಈಗ ಚುನಾವಣಾ ರಾಜಕೀಯ ಚಿತ್ರಣ ಮತ್ತೊಂದು ಮಗ್ಗಲನ್ನು ಮುಟ್ಟಿದೆ. ಈಗ ಇಡೀ ಚುನಾವಣೆ ಮುಸ್ಲಿಂ ಮೀಸಲಾತಿಯ ಮೇಲೆ ಕೇಂದ್ರೀಕೃತವಾಗಿದೆ. ಅದು ಎನ್‌ಡಿಎ ಅಥವಾ ಇಂಡಿಯಾ ಮೈತ್ರಿಯಾಗಿರಲಿ, ಎಲ್ಲರ ಗುರಿ ಮುಸ್ಲಿಂ ಮೀಸಲಾತಿ.

ಹಲವು ಅಭಿವೃದ್ಧಿ ವಿಷಯಗಳು ಚರ್ಚಾ ವಿಷಯವಾಗಬೇಕಿದ್ದ ಈ ಸಮಯದಲ್ಲಿ ಸಮುದಾಯವನ್ನು ಎಲ್ಲ ಪಕ್ಷಗಳು ಗುರಿಯಾಗಿಸಿವೆ. ಬಿಹಾರದ ಸಸಾರಾಮ್ ಲೋಕಸಭಾ ಕ್ಷೇತ್ರದ ಪ್ರಚಾರದ ವೇಳೆ ಪ್ರಧಾನಿ ನರೇಂದ್ರ ಮೋದಿ ಇಂಡಿಯಾ ಮೈತ್ರಿ ಕೂಟದ ವಿರುದ್ಧ ಹರಿಹಾಯ್ದಿದ್ದಾರೆ. ಮುಸ್ಲಿಮರಿಗೆ ಅಸಂವಿಧಾನಿಕ ಮೀಸಲಾತಿ ನೀಡುವ ಬಗ್ಗೆ ಭಾರತ ಮೈತ್ರಿಕೂಟ ಮಾತನಾಡಿದೆ. ಈ ಮೂಲಕ ವಿರೋಧ ಪಕ್ಷಗಳು ಸಂವಿಧಾನದ ಬೆನ್ನಿಗೆ ಚೂರಿ ಹಾಕುತ್ತಿವೆ. ಮುಸಲ್ಮಾನರಿಗೆ ಮೀಸಲಾತಿ ನೀಡಲು ಇಂಡಿಯಾ ಮೈತ್ರಿ ಕೂಟ ಷಡ್ಯಂತ್ರ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಬಿಹಾರದ ಬಡವರನ್ನು ಲೂಟಿ ಮಾಡಿದ ಮತ್ತು ಉದ್ಯೋಗದ ವಿನಿಮಯಕ್ಕಾಗಿ ಭೂಮಿಯನ್ನು ಪಡೆದಿರುವ ಬಿಹಾರದ ಜನರಿಗೆ ಇಂದು ನಾನು ಮತ್ತೊಂದು ಗ್ಯಾರಂಟಿ ನೀಡುತ್ತಿದ್ದೇನೆ. ತೆರೆದ ಕಿವಿಯಿಂದ ಕೇಳಿ, ಅವನು ಜೈಲಿಗೆ ಹೋಗುವ ಕ್ಷಣಗಣನೆ ಕೂಡ ಪ್ರಾರಂಭವಾಗಿದೆ ಎಂದು ಪರೋಕ್ಷವಾಗಿ ಬಿಹಾರ ನಾಯಕನಿಗೆ ಎಚ್ಚರಿಕೆ ನೀಡಿದರು.

ವಿರೋಧ ಪಕ್ಷಗಳ ಮೈತ್ರಿಕೂಟ 'ಇಂಡಿಯಾ' ಅಧಿಕಾರಕ್ಕೆ ಬಂದರೆ ಮುಸ್ಲಿಮರ ಅನುಕೂಲಕ್ಕಾಗಿ ಸಂವಿಧಾನವನ್ನು ಬದಲಾಯಿಸುವುದಾಗಿ ಪ್ರಧಾನಿ ಹೇಳಿದರು. ತನ್ನ ಮತ ಬ್ಯಾಂಕ್ ಅನ್ನು ಮೆಚ್ಚಿಸಲು, ಕಾಂಗ್ರೆಸ್ ರಾತ್ರೋರಾತ್ರಿ ಅಲ್ಪಸಂಖ್ಯಾತ ಸಂಸ್ಥೆಗಳಿಗೆ ಸಂಬಂಧಿಸಿದ ಕಾನೂನನ್ನು ಬದಲಾಯಿಸಿದೆ. ಇದರ ನಂತರ, ಸಾವಿರಾರು ಸಂಸ್ಥೆಗಳನ್ನು ಅಲ್ಪಸಂಖ್ಯಾತ ಸಂಸ್ಥೆಗಳೆಂದು ಘೋಷಿಸಲಾಯಿತು. ಮೊದಲು ಈ ಸಂಸ್ಥೆಗಳಲ್ಲಿ ಪ್ರವೇಶದ ಸಮಯದಲ್ಲಿ, ಎಸ್‌ಸಿ, ಎಸ್‌ಟಿ



ಮತ್ತು ಒಬಿಸಿ ಸಂಪೂರ್ಣ ಮೀಸಲಾತಿ ಪಡೆಯುತ್ತಿತ್ತು. ಆದರೆ ಆರ್‌ಜೆಡಿ–ಕಾಂಗ್ರೆಸ್‌ನಿಂದಾಗಿ ಇಂದು ಎಸ್‌ಸಿ, ಎಸ್‌ಟಿ ಮತ್ತು ಒಬಿಸಿಗಳಿಗೆ ಅಲ್ಪಸಂಖ್ಯಾತ ಸಂಸ್ಥೆಗಳಲ್ಲಿ ಶೇ.1ರಷ್ಟು ಮೀಸಲಾತಿ ಸಿಗುತ್ತಿಲ್ಲ ಎಂದು ಕಿಡಿ ಕಾರಿದರು.

2024 ರ ಈ ಚುನಾವಣೆಯಲ್ಲಿ ನಾನು ಈ ಪಕ್ಷಗಳ ಈ ಪಿತೂ–ರಿಯನ್ನು ಬಹಿರಂಗಪಡಿಸಿದಾಗ. ಹಾಗಾಗಿ ಒಂದರ ಹಿಂದೆ ಒಂದರಂತೆ ಅವರ ಎಸ್ಸಿ, ಎಸ್ಟಿ ಮತ್ತು ಒಬಿಸಿ ಮೀಸಲಾತಿ ವಿರೋಧಿ ಕಾಯ್ದೆಗಳು ಬೆಳಕಿಗೆ ಬರುತ್ತಿವೆ. ಆದರೆ ಆರ್‌ಜೆಡಿ–ಕಾಂಗ್ರೆಸ್ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಕೋಟಾವನ್ನು ರದ್ದುಪಡಿಸಿ ಧರ್ಮದ ಆಧಾರದ ಮೇಲೆ ತಮ್ಮ ಮತ ಬ್ಯಾಂಕ್‌ಗೆ ಮೀಸಲಾತಿ ನೀಡಲು ಬಯಸುತ್ತವೆ ಎಂದು ಮೋದಿ ತಿಳಿಸಿದರು.

## ಭಾವರಶ್ಮಿ

– ಶೀತಲ್ ಹೆಗಡೆ

("ನಮ್ಮ ಕಥಾ ಅರಮನೆ" ಬರಹಗಾರರು)

**ಉದಯರಶ್ಮಿ ದಿನಪತ್ರಿಕೆ**




ಮನುಸ್ಮೃತಿಯ "ನ ಸ್ತ್ರೀ ಸ್ವಾತಂತ್ರ್ಯಂ ಅರ್ಹತಿ" ಎಂಬುದು ಎಷ್ಟು ಆಳವಾಗಿ ಬೇರೂ–ರಿದೆ ಎಂದರೆ,ಅದು ಆಧುನಿಕ 'ಸ್ತ್ರೀ– ಪುರುಷ ಸಮಾನತೆ' ಯ ಕಾಲದಲ್ಲೂ ಸಮಾಜದಿಂದ ಸಂಪೂರ್ಣವಾಗಿ ತೊರೆದು ಹೋಗಿಲ್ಲ. ಇಂದಿನ ಸಮಾಜದಲ್ಲಿ ಸ್ತ್ರೀ– ಪುರುಷರು ಸಮಾನರು ಎನ್ನುವುದು ಕಾನೂನುಬದ್ಧ. ಆದರೆ ಒಂದು ಕಾಲದಲ್ಲಿ ಶಿಕ್ಷಣವನ್ನು ಪಡೆಯುವ ಸ್ವಾತಂತ್ರ್ಯವಿಲ್ಲದ ಸ್ತ್ರೀಗೆ ಇಂದು ಶಿಕ್ಷಣದ ಸ್ವಾತಂತ್ರ್ಯವಿದ್ದರೂ ,ಇನ್ನೂ ಸ್ತ್ರೀ ಸರ್ವ ಸ್ವತಂತ್ರಳು ಎಂದು ಹೇಳುವುದಕ್ಕೆ ಸಾಧ್ಯವಿಲ್ಲ.


ಸ್ತ್ರೀ ಸ್ವಾತಂತ್ರ್ಯವೆಂದರೆ ಎಲ್ಲಿ ಬೇಕಾದರೂ ಹೋಗಬಹುದು,ಏನು ಬೇಕಾದರೂ ಮಾಡಬಹುದು ಎಂಬುವುದರ್ಥವಲ್ಲ.ಸ್ತ್ರೀ ಸ್ವಾತಂತ್ರ್ಯವೆಂದರೆ ಮಹಿಳೆ ಸಮಾಜದ,ತನ್ನ ಕುಟುಂಬದ ಹಾಗೂ ವೈಯಕ್ತಿಕವಾದ ಎಲ್ಲ ವಿಚಾರಗಳಲ್ಲಿ ತನ್ನದೇ ಆದ ನಿರ್ಧಾರಗಳನ್ನು ಕೈಗೊಳ್ಳುವಂತಹ ಸ್ವಾತಂತ್ರ್ಯ.ಎಷ್ಟು ಮಂದಿ ಮಹಿಳೆಯರಿಗೆ ಇಂತಹ ಸ್ವಾತಂತ್ರ್ಯ ಇದೆ.ಕೇವಲ ಕೆಲವೇ ಕೆಲವ–ರಿಗಿರಬಹುದು.ಇಂದು ಎಷ್ಟೊಂದು ಮನೆಗಳಲ್ಲಿ ವಿದ್ಯಾವಂತ ಸ್ತ್ರೀಯರು ಸ್ವತಂತ್ರವಾಗಿದ್ದಾರೆ? ಎಂದರೆ ಕೇವಲ ಬೆರಳೆಣಿಕೆಯಷ್ಟು ಸ್ತ್ರೀಯರು ಮಾತ್ರ ನಮಗೆ ಕಾಣಸಿಗುತ್ತಾರೆ. ಅವಿದ್ಯಾವಂತ ಸ್ತ್ರೀಯರಂತೂ ಅಧಿಕಾರದ ಹಾಗೂ ಇನ್ನಿತರ ಕೆಲವು ಹಕ್ಕುಗಳನ್ನು ಚಲಾಯಿಸುವ ಸಂದರ್ಭಗಳಲ್ಲಿ ಪುರುಷರ ಕೈಗೊಂಬೆಗಳಾಗಿ ವರ್ತಿಸಬೇಕಾದ ಅನಿವಾರ್ಯತೆ ಇದೆ. ಈ ನಿಟ್ಟಿನಲ್ಲಿ ಸ್ತ್ರೀ ವಿದ್ಯಾವಂತಳಾದರೂ ಸಹ, ಸಮಾಜದಲ್ಲಿ ಸ್ವತಂತ್ರಳೆಂದು ಪರಿಗಣಿಸಿದರೂ ಸಹ ,ನಿಜವಾದ ಅರ್ಥದಲ್ಲಿ ಅವಳು ಸ್ವತಂತ್ರವಾಗಿ ಬದುಕುತ್ತಾ ಇಲ್ಲವೆಂದೇ ಹೇಳಬಹುದು.

ಪುರುಷ ಪ್ರಧಾನ ಸಮಾಜ ಹಾಗೂ ಕುಟುಂಬದಲ್ಲಿ ಮಹಿಳೆಗೆ ಸಂಪೂರ್ಣ ಸ್ವಾತಂತ್ರ್ಯವನ್ನು ಇನ್ನೂ ಅನುಭವಿಸಲು ಆಗ್ತಾ ಇಲ್ಲ ಎಂದೇ ಹೇಳಬಹುದು. ಸಮಾಜದಲ್ಲಿ ವಿದ್ಯಾವಂತ ಸ್ತ್ರೀ ಕೆಲವೊಂದು ಕಟ್ಟುಪಾಡುಗಳಿಗೆ ಕಟ್ಟು ಬಿದ್ದು, ತನಗಿರುವ ಸ್ವಾತಂತ್ರ್ಯವನ್ನು ಅನುಭವಿಸಲಾಗದೆ ಅವಲಂಬನೆಯನ್ನು ಮಾಡಬೇಕಾದ ಪರಿಸ್ಥಿತಿ ಹಲವು ಸಲ ನಾವು ಕಂಡಿದ್ದೇವೆ, ಕಾಣುತ್ತಿದ್ದೇವೆ ಕಾನೂನಿನ ಪ್ರಕಾರ ಸ್ತ್ರೀ ಸ್ವತಂತ್ರಳು ಆಗಿದ್ದರೂ ಸಹ,ನಿಜವಾದ ಅರ್ಥದಲ್ಲಿ ಸ್ತ್ರೀ ಸಂಪೂರ್ಣವಾದ ಸ್ವಾತಂತ್ರವನ್ನು ಅನುಭವಿಸುವ ಸ್ಥಿತಿಯಲ್ಲಿಲ್ಲ .ಒಂದಲ್ಲ ಒಂದು ಕಾರಣ–ಕ್ಕೆ ಸ್ತ್ರೀ ವಿದ್ಯಾವಂತಳಾದರೂ ಇತರರ ಅಭಿಪ್ರಾಯಕ್ಕೆ ತಲೆಬಾಗಲೇಬೇಕಾದ ಅನಿವಾರ್ಯತೆ ಸೃಷ್ಟಿಯಾಗುತ್ತದೆ. "ಪುರುಷ ಪ್ರಧಾನ"ಎಂಬ ನಿಲುವು ಸಮಾಜದಲ್ಲಿ ಆಳವಾಗಿ ಹೂತು ಹೋಗಿರುವುದನ್ನು ಬೇರು ಸಹಿತ ಕಿತ್ತೊಗೆಯಬೇಕಾದರೆ ಬಹಳಷ್ಟು ಕಾಲಹಿಡಿಯುತ್ತದೆ ಸಾಕಷ್ಟು ಶ್ರಮ ಪಡುವ ಅಗತ್ಯವಿದೆ. ಮಹಿಳೆಯರಿಗೆ ಪುರುಷರಷ್ಟೇ ಹಕ್ಕು,ಬಾಧ್ಯತೆಗಳಿರುವಾಗ,ಕಾನೂನು ಮಹಿಳೆಗೆ ಸಮಾನತೆಯನ್ನು ನೀಡಿರುವಾಗ,ಅದನ್ನು ಅನುಭವಿಸುವ ಸ್ವಾತಂತ್ರ್ಯ ಮಹಿಳೆಗಿದೆ.ಅದನ್ನು ಅನುಭವಿಸ್ತಾ ಇಲ್ಲವೆಂದರೆ ಅದಕ್ಕೆ ತೊಡಕು ಮಹಿಳೆಯಲ್ಲಿಯೇ ಇದೆ ಎಂದು ಅರ್ಥವಲ್ಲವೇ? ಕೇವಲ ಸಮಾನತೆ,ಸಮಾನತೆ ಎಂದರೆ ಸಮಾನತೆಯಾಗದು.ಸ್ವಾತಂತ್ರವೆಂದರೆ ಸ್ವೇಚ್ಛೆಯಲ್ಲ.ಕಾನೂನಾತ್ಮಕವಾಗಿ ಸಿಕ್ಕಂತಹ ಸ್ವಾತಂತ್ರ್ಯವನ್ನು ದುರ್ಬಳಕೆ ಮಾಡದೇ ಅದನ್ನು ಬಳಸಿಕೊಂಡು ಮಹಿಳೆಯರು ಸಮಾನರಾಗಿ ಎದ್ದು ನಿಲ್ಲಬೇಕು.

ಒಂದು ಸಮಾಜದಲ್ಲಿ ಒಬ್ಬ ವಿದ್ಯಾವಂತ ಸ್ತ್ರೀ ತನ್ನ ಜೀವನವನ್ನ ನಿರ್ಭೀತಿಯಿಂದ, ಸ್ವತಂತ್ರಳಾಗಿ, ಸಂತೃಪ್ತಿಯಲ್ಲಿ ಕಳೆಯಬೇಕಿದ್ದರೆ ಅವಳಲ್ಲಿ ಧೈರ್ಯ, ಸ್ಥೈರ್ಯ, ಮಾನಸಿಕ ಗಟ್ಟಿತನ ಇರಲೇಬೇಕಾಗುತ್ತದೆ. ಇಂದು ಸಮಾಜದಲ್ಲಿ ಎಷ್ಟು ಮಂದಿ ಸ್ತ್ರೀಯರು ಇಂತಹ ಧೈರ್ಯವನ್ನು, ಸ್ಥೈರ್ಯವನ್ನು, ಗಟ್ಟಿತನವನ್ನು ಹೊಂದಿರುತ್ತಾರೋ ಅವರು ಸ್ವತಂತ್ರವಾಗಿ ಬದುಕುತ್ತಾರೆ. "ಬೇರೆಯವರು ಏನೇ ಹೇಳಲಿ ತಾನು ತನಗಾಗಿ ಬದುಕುತ್ತೇನೆ "ಎಂಬ ದೃಢ ನಿರ್ಧಾರದಿಂದ



ಮುಂದುವರಿಯುತ್ತಾರೆ. ಆದರೆ ಇಂತಹ ಧೈರ್ಯ ಎಲ್ಲಾ ಸ್ತ್ರೀಯರಿಗೆ ಬರಲಾರದು. ಕೆಲವರು ಅವರಿವರ ಬೆದರಿಕೆಗೆ ,ಕುಹಕನುಡಿಗೆ ಹೆದರಿ ಅವಲಂಬನೆಯ ಬದುಕನ್ನೇ ಇನ್ನೂ ಕೂಡ ಬದುಕುವವರು ಇದ್ದಾರೆ .ವಿದ್ಯಾವಂತರಾದರೂ, ಬುದ್ಧಿವಂತಿ–ಕೆ ಇದ್ದರೂ ಸ್ವಾತಂತ್ರ್ಯವಿಲ್ಲದೆ ಪರದಾಡುವವರೂ ಇದ್ದಾರೆ. ಹಾಗಾಗಿ ನಮ್ಮ ಸಮಾನತೆಯ ಸಮಾಜದಲ್ಲಿ ಸ್ತ್ರೀ ಸಂಪೂರ್ಣ ಸ್ವತಂತ್ರಳಾಗಿ ಬದುಕಬೇಕಾದರೆ ಇನ್ನಷ್ಟು ಧೈರ್ಯ ತುಂಬುವ ಕೆಲಸವಾಗಬೇಕು,ಗಂಡಸರೂ ಕೂಡ ತ್ಯಾಗ, ಸಮರ್ಪಣಾ ಭಾವ, ಸ್ವೀಕೃತ ಮನೋಭಾವ ಬೆಳೆಸಬೇಕಾಗಿದೆ. ಒಟ್ಟಿನಲ್ಲಿ ಹೇಳುವುದಾದರೆ ಸಮಾಜದಲ್ಲಿ ವಿದ್ಯಾವಂತ ಸ್ತ್ರೀ ಇರಲಿ ಅವಿದ್ಯಾವಂತಳಿರಲಿ ಸಂಪೂರ್ಣ ಸ್ವತಂತ್ರಳಾಗಿ ಬದುಕು ನಡೆಸಲು ಆಗುತ್ತಿಲ್ಲ ಎಂಬುವುದು ನಾವು ಕಾಣುತ್ತಿರುವ ಸತ್ಯ. ಇದು ಸಾಧ್ಯವಾಗಬೇಕಾದರೆ ಮಹಿಳೆಯರೇ ಮನಸ್ಸು ಮಾಡಬೇಕು. ಸ್ವಾತಂತ್ರ್ಯದ ಅಮಲಿನಲ್ಲಿ ದಾರಿ ತಪ್ಪಬಾರದು. ಅನುಭವಿಸುವ ಸ್ವಾತಂತ್ರ್ಯದಿಂದ ಬೇರೆಯವರ ಜೀವನಕ್ಕೆ ಕಂಟಕ ಬರಬಾರದು.ಸಾಮಾಜಿಕ ಸ್ವಾಸ್ಥ್ಯ ಕೆಡಬಾರದು.ನಮ್ಮ ಸ್ವತಂತ್ರ ಬದುಕಿನಿಂದ ಸಾಮರಸ್ಯದ ಜೀವನ ನಡೆಯಬೇಕು.ಆ ನಿಟ್ಟಿನಲ್ಲಿ ಪೂರಕವಾದ ವಾತಾವರಣವನ್ನು ಬೆಳೆಸಬೇಕಾಗದರೆ ಮಹಿಳೆಯರು ಸ್ವಾತಂತ್ರ್ಯವೆಂದು ಬೀಗದೆ ಮಾಗಬೇಕಾಗಿದೆ.ಪುರುಷ–ರಿಗೆ ಸಮಾನರಾಗಿ,ಸ್ತ್ರೀ–ಪುರುಷರು ಸಮಾಜದ ಎರಡು ಕಣ್ಣುಗಳಾಗಿ ಬದುಕಬೇಕಾಗಿದೆ. ಮಹಿಳೆಯ ಮನಸ್ಸು ಗಟ್ಟಿಯಾಗಬೇಕಿದೆ.ಸಾಮಾಜಿ–ಕ ಜೀವನದಲ್ಲಿ ಎದುರಾಗುವ ಸವಾಲುಗಳಿಗೆ ಸಡ್ಡೊಡೆದು ಸ್ವತಂತ್ರ ಜೀವನ ನಡೆಸುವಷ್ಟು ಮಹಿಳೆಯರು ಗಟ್ಟಿಯಾದರೆ ಅದುವೇ ಸ್ತ್ರೀ ಸ್ವಾತಂತ್ರ್ಯ,ಸಮಾನತೆ.



## ಭದ್ರತಾ ಪಡೆಗಳ ಎನ್‌ಕೌಂಟರ್‌ಗೆ ಮೂವರು ನಕ್ಸಲರು ಬಲಿ

ರಾಯ್‌ಪುರ: ಛತ್ತೀಸ್‌ಗಢದ ದಕ್ಷಿಣ ಬಸ್ತಾರ್ ಪ್ರದೇಶದಲ್ಲಿ ಶನಿವಾರ ಭದ್ರತಾ ಸಿಬ್ಬಂದಿಯೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಮೂವರು ನಕ್ಸಲರು ಹತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಿಜಾಪುರ ಜಿಲ್ಲೆಯುಲ್ಲಿ ಇಬ್ಬರು ನಕ್ಸಲೀಯರನ್ನು ಹೊಡೆದುರುಳಿಸಲಾಗಿದ್ದು, ಮತ್ತೊಬ್ಬರು ನೆರೆಯ ಸುಕ್ಮಾ ಜಿಲ್ಲೆಯಲ್ಲಿ ಎನ್ ಕೌಂಟರ್ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

ಬಿಜಾಪುರದಲ್ಲಿ, ಮಿರ್ತೂರ್ ಪೊಲೀಸ್ ಠಾಣಾ ವ್ಯಾಪ್ತಿಯ



ಜಪ್ಪೆಮಾರ್ಕ–ಕಮ್ಕನಾರ್ ಗ್ರಾಮಗಳ ಸಮೀಪವಿರುವ ಕಾಡಿನಲ್ಲಿ ನಕ್ಸಲರೊಂದಿಗೆ ಗುಂಡಿನ ಚಕಮಕಿ ನಡೆದಿದೆ. ಅಲ್ಲಿ ಜಿಲ್ಲಾ ಮೀಸಲು ಗಾರ್ಡ್(ಡಿಆರ್‌ಜಿ) ತಂಡವು ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದೆ ಎಂದು ಅಧಿಕಾ–ರಿಯೊಬ್ಬರು ತಿಳಿಸಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR